ಸಂಪುಟ: 11 ಸಂಚಿಕೆ: 184 ಪುಟ: 4+2 ಬೆಲೆ : 3.00 ಬುಧವಾರ, ಆಗಸ್ಟ್ 26, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 184 Pages : 4+2 Rate : 3.00 Wednesday, August 26, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ಮದ್ಯ ಮಾರಾಟ, ಸಾಗಾಟ ನಿಷೇಧ

**ವಿಜಯಸಾಕ್ಷಿ ಸುದ್ದಿ, ಗದಗ**

ಈದ್ ಮಿಲಾದ್ ಹಬ್ಬ ಹಾಗೂ ಗದಗ-ಬೆಟಗೇರಿ ಅವಳಿ ನಗರದಲ್ಲಿ 12 ವರ್ಷಗಳಿಗೊಮ್ಮೆ ನಡೆಯುವ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗವ್ವ ದೇವಿಯರ ಹರಿ ಜಾತ್ರೋತ್ಸವದ ಮೆರವಣಿಗೆ ಕಾರ್ಯಕ್ರಮಗಳು ನಡೆಯಲಿರುವ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಮದ್ಯ ಮಾರಾಟ ಮತ್ತು ಸಾಗಾಟವನ್ನು ನಿಷೇಧಿಸಲಾಗಿದೆ. ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾಧಿಕಾರಿಗಳು ಈ ಆದೇಶ ಹೊರಡಿಸಿದ್ದಾರೆ. ಆ.25ರ ಸಂಜೆ 4 ಗಂಟೆಯಿಂದ ಆ.27ರ ಬೆಳಿಗ್ಗೆ 6 ಗಂಟೆಯವರೆಗೆ ಗದಗ ಜಿಲ್ಲೆಯಾದ್ಯಂತ ಎಲ್ಲ ರೀತಿಯ ಮದ್ಯ ಮಾರಾಟ ಹಾಗೂ ಸಾಗಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

## ಶ್ರೀಕೃಷ್ಣ, ವಿಶ್ವಕರ್ಮ ಜಯಂತಿ: ನಾಳೆ ಪೂರ್ವಭಾವಿ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಸೆ. 4ರಂದು ಆಚರಿಸಲಾಗುವ ಶ್ರೀಕೃಷ್ಣ ಜಯಂತಿ ಹಾಗೂ ಸೆ. 17ರಂದು ಆಚರಿಸಲಾಗುವ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮಗಳ ಪೂರ್ವಭಾವಿ ಸಭೆಯನ್ನು ಆ. 27ರಂದು ಗುರುವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕರೆಯಲಾಗಿದೆ. ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮದ ರೂಪುರೇಷೆಗಳ ಕುರಿತು ಚರ್ಚಿಸಲಾಗುವುದು. ಬಳಿಕ ಬೆಳಿಗ್ಗೆ 11.30 ಗಂಟೆಗೆ ಪೂರ್ವಭಾವಿ ಸಭೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವ್ಹಿ. ಬಳ್ಳಾರಿ ತಿಳಿಸಿದ್ದಾರೆ.

### ಶಾಲೆ ಮುಚ್ಚುವ ಹಂತ ತಲುಪಿರುವ ಕುರಿತು ಆಕ್ರೋಶ ವ್ಯಕ್ತಪಡಿಸಿದ ಶಿಕ್ಷಣ ಪ್ರೇಮಿಗಳು- ಪೋಷಕರು

# ಬೀಗ ಹಾಕಿದ್ದ ಸರ್ಕಾರಿ ಶಾಲೆ ಮತ್ತೆ ಆರಂಭ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಕ್ಕಳ ಸಂಖ್ಯೆ ಕುಸಿದ ಹಿನ್ನೆಲೆಯಲ್ಲಿ ಕಳೆದ ಮೂರು-ನಾಲ್ಕು ದಿನಗಳಿಂದ ಬೀಗ ಹಾಕಿದ್ದ ಪಟ್ಟಣದ ಕೆಂಚಲಾಪುರ ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಾಗಿಲು ಕೊನೆಗೂ ಮಂಗಳವಾರ ತೆರೆದು, ಮತ್ತೆ ಮಕ್ಕಳ ಕಲರವ ಮೊಳಗಿತು. ಶಾಲೆ ಮುಚ್ಚುವ ಹಂತ ತಲುಪಿರುವ ಕುರಿತು ಶಿಕ್ಷಣ ಪ್ರೇಮಿಗಳು ಹಾಗೂ ಪೋಷಕರು ಸೋಮವಾರ ಶಿಕ್ಷಣ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಬೆನ್ನಲ್ಲೇ ಎಚ್ಚೆತ್ತ ಅಧಿಕಾರಿಗಳು, ಮಕ್ಕಳನ್ನು ಬೇರೆ ಶಾಲೆಗಳಿಗೆ ವರ್ಗಾಯಿಸಿದ್ದ ಪಾಲಕರ ಮನೆಗಳಿಗೆ ತೆರಳಿ ಮನವೊಲಿಸುವ ಮೂಲಕ ಐವರು ಮಕ್ಕಳನ್ನು ಮರಳಿ ಶಾಲೆಗೆ ಕರೆತರುವಲ್ಲಿ ಯಶಸ್ವಿಯಾಗಿದ್ದಾರೆ.

ಕಳೆದ ಮೂರು ದಶಕಗಳಿಂದ ಕೆಂಚಲಾಪುರ ಬಡಾವಣೆಯ ಮಕ್ಕಳಿಗೆ ಶಿಕ್ಷಣದ ಬೆಳಕು ನೀಡುತ್ತಿದ್ದ ಈ ಶಾಲೆಯಲ್ಲಿ ಕಳೆದ ನಾಲ್ಕು ವರ್ಷಗಳಿಂದ ದಾಖಲಾತಿ ಸಂಖ್ಯೆ ನಿರಂತರವಾಗಿ ಕುಸಿಯುತ್ತ ಬಂದಿದೆ. ಕಳೆದ ವರ್ಷ 1ರಿಂದ 7ನೇ ತರಗತಿವರೆಗೆ ಒಟ್ಟು 26 ಮಕ್ಕಳು ದಾಖಲಾಗಿದ್ದರೆ, 2026-27ನೇ ಸಾಲಿನಲ್ಲಿ ಈ ಸಂಖ್ಯೆ ಕೇವಲ 11ಕ್ಕೆ ಇಳಿದಿತ್ತು. ಈ ಪೈಕಿ ಕೆಲವರು ಬೇರೆ ಶಾಲೆಗಳಿಗೆ



ವರ್ಗಾವಣೆಯಾಗಿದ್ದರಿಂದ ಶಾಲೆಯ ಭವಿಷ್ಯದ ಬಗ್ಗೆಯೇ ಆತಂಕ ಎದುರಾಗಿತ್ತು.

**ಶಿಕ್ಷಕರ ಕೊರತೆಯೂ ಶಾಲೆ ಖಾಲಿಯಾಗಲು ಕಾರಣ**

ಶಾಲೆಯಲ್ಲಿದ್ದ ಇಬ್ಬರು ಶಿಕ್ಷಕರನ್ನು ಶೈಕ್ಷಣಿಕ ವರ್ಷದ ಆರಂಭದಲ್ಲೇ ಎಸ್ಐಆರ್ ಕಾರ್ಯಕ್ಕೆ ನಿಯೋಜಿಸಿದ್ದರಿಂದ ಬೋಧನಾ ಚಟುವಟಿಕೆಗಳಿಗೆ ತೊಂದರೆಯಾಗಿತ್ತು. ಮಕ್ಕಳಿಗೆ ಸಮರ್ಪಕ ಶಿಕ್ಷಣ ದೊರೆಯುತ್ತಿಲ್ಲ ಎಂಬ ಕಾರಣ ನೀಡಿ ಕೆಲವು ಪಾಲಕರು ತಮ್ಮ ಮಕ್ಕಳನ್ನು ಬೇರೆ ಶಾಲೆಗಳಿಗೆ ದಾಖಲಿಸಿದ್ದರು. ಇದರಿಂದ ವಿದ್ಯಾರ್ಥಿಗಳ ಸಂಖ್ಯೆ ಮತ್ತಷ್ಟು ಕುಸಿದು, ಶಾಲೆಯೇ ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಈ ಕುರಿತು ಸಾರ್ವಜನಿಕ ವಲಯದಲ್ಲಿ ಆಕ್ರೋಶ ವ್ಯಕ್ತವಾಗುತ್ತಿದ್ದಂತೆ ಎಚ್ಚೆತ್ತ ಶಿಕ್ಷಣ ಇಲಾಖೆ ಅಧಿಕಾರಿಗಳು ಮಂಗಳವಾರ ಶಾಲೆಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿದರು. ಬಳಿಕ ಬೇರೆ ಶಾಲೆಗಳಿಗೆ ಮಕ್ಕಳನ್ನು ವರ್ಗಾಯಿಸಿದ್ದ ಪಾಲಕರ ಮನೆಗಳಿಗೆ ತೆರಳಿ, ಮಕ್ಕಳನ್ನು ಇದೇ ಶಾಲೆಯಲ್ಲಿ ಮುಂದುವರಿಸುವಂತೆ ಮನವಿ ಮಾಡಿದರು.

ಅಧಿಕಾರಿಗಳ ಮನವಿಗೆ ಸ್ಪಂದಿಸಿದ ಪಾಲಕರಿಂದ ಐವರು ಮಕ್ಕಳು ಮಂಗಳವಾರವೇ ಶಾಲೆಗೆ ಮರಳಿದ್ದು, ತರಗತಿಗಳು ಪುನರಾರಂಭಗೊಂಡವು.

ಎರಡು ದಿನದಲ್ಲಿ ಪರಿಣಿತ ಶಿಕ್ಷಕರ ನಿಯೋಜನೆ

ಶಾಲೆಯ ಬೋಧನಾ ಗುಣಮಟ್ಟದ ಕುರಿತು ಪಾಲಕರು ಆತಂಕಪಡುವ ಅಗತ್ಯವಿಲ್ಲ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸೀಮಿಕೇರಿ ಭರವಸೆ ನೀಡಿದರು.

> **ಸರ್ಕಾರಿ ಶಾಲೆಗಳನ್ನು ಬಂದ್ ಮಾಡುವ ಯಾವುದೇ ಉದ್ದೇಶ ಶಿಕ್ಷಣ ಇಲಾಖೆಗೆ ಇಲ್ಲ. ಪಾಲಕರು ಆತಂಕಪಡುವ ಅಗತ್ಯವಿಲ್ಲ. ಎರಡು ದಿನಗಳಲ್ಲಿ ಓರ್ವ ಪರಿಣಿತ ಶಿಕ್ಷಕರನ್ನು ಶಾಲೆಗೆ ನಿಯೋಜಿಸಲಾಗುವುದು. ಇಂದಿನಿಂದ ಶಾಲೆ ಎಂದಿನಂತೆ ಕಾರ್ಯನಿರ್ವಹಿಸಲಿದೆ. ಉಳಿದ ಮಕ್ಕಳನ್ನೂ ಮರಳಿ ಶಾಲೆಗೆ ಕರೆತರಲು ಕ್ರಮ ಕೈಗೊಳ್ಳಲಾಗುವುದು. ಪಾಲಕರು, ಎಸ್‌ಡಿಎಂಸಿ ಸದಸ್ಯರು ಹಾಗೂ ಸಾರ್ವಜನಿಕರನ್ನು ಒಳಗೊಂಡ ಸಭೆ ನಡೆಸಿ, ಶಾಲೆಯ ಅಭಿವೃದ್ಧಿಗೆ ಎಲ್ಲರ ಸಹಕಾರ ಪಡೆಯಲಾಗುವುದು.**
>
> -**ಶಿವರಾಜ ಸೀಮಿಕೇರಿ**, ಕ್ಷೇತ್ರ ಶಿಕ್ಷಣಾಧಿಕಾರಿ

ಶಾಲೆಯ ಪುನರಾರಂಭದ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಕೆ. ಹವಾಲ್ದಾರ, ಶಿಕ್ಷಣ ಸಂಯೋಜಕ ಆರ್.ಬಿ. ಜೋಶಿ, ಸಿಆರ್‌ಪಿಗಳಾದ ಉಮೇಶ ನೇಕಾರ, ಎನ್.ಎ. ಮುಲ್ಲಾ, ಎಸ್.ಎಚ್. ಮತ್ತೂರ, ಎಸ್‌ಡಿಎಂಸಿ ಅಧ್ಯಕ್ಷ ಸುಲೇಮಾನ್ ಮುಜಾವರ್, ಹೇಮಣ್ಣ ಬುರಡಿ, ತಿಪ್ಪಣ್ಣ ರೊಟ್ಟಿಗವಾಡ ಸೇರಿದಂತೆ ಶಿಕ್ಷಣ ಇಲಾಖೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಇಂದು ಪೈಗಂಬರ್ ಜಯಂತಿ ಆಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಅವಳಿ ನಗರದ ಈದ್ ಮಿಲಾದ್ ಕಮಿಟಿ ವತಿಯಿಂದ ಆ. 26ರಂದು ಹಜರತ್ ಮಹಮ್ಮದ್ ಪೈಗಂಬರ್ ಜಯಂತ್ಯುತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ನಗರದ ಉರ್ದು ಸೆಂಟ್ರಲ್ ಸ್ಕೂಲ್‌ನಲ್ಲಿ ವಿವಿಧ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಂಜುಮನ್-ಏ-ಇಸ್ಲಾಂ ಕಮಿಟಿ ಸದಸ್ಯ ಬಾಷಾಸಾಬ್ ಮಲ್ಲಸಮುದ್ರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ನೇತೃತ್ವವನ್ನು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ವಹಿಸಲಿದ್ದು, ಜಮಿಯತೆ ಉಲ್ಮಾ ಕಮಿಟಿ ಅಧ್ಯಕ್ಷ ಮೌಲಾನಾ ಇನಾಯಿತುಲ್ಲಾಸಾಬ ಸಾನಿಧ್ಯ ವಹಿಸಲಿದ್ದಾರೆ. ಮೌಲಾನಾ ಅಬ್ದುಲ್ ರಹೀಂ ಚಂದುನವರ ಪ್ರಾರ್ಥನಾ ಗೀತೆ ಹಾಡಲಿದ್ದಾರೆ ಎಂದರು. ಮಾಜಿ ಸಚಿವ, ಶಾಸಕ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದು, ಬೆಳಗಾವಿ ಜಮಿಯತೆ ಉಲ್ಮಾ ಜಿಲ್ಲಾ ಕಾರ್ಯದರ್ಶಿ ಹಜರತ್ ಮೌಲಾನಾ ಮಹಮ್ಮದ್ ಆರೀಫ್‌ಸಾಬ್ ಇನಾಮಿ ಉಪನ್ಯಾಸ ನೀಡಲಿದ್ದಾರೆ. ಎನ್‌ಡಬ್ಲ್ಯುಆರ್‌ಟಿಸಿ ಹುಬ್ಬಳ್ಳಿ ಮಾಜಿ ಉಪಾಧ್ಯಕ್ಷ ಪೀರಸಾಬ ಕೌತಾಳ ಬಟ್ಟೆ ವಿತರಿಸಲಿದ್ದಾರೆ. ಆಸೀಫ್ ದಂಡಿನ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಹೇಳಿದರು.




ಜಯಂತ್ಯುತ್ಸವದ ಅಂಗವಾಗಿ ಪಠ್ಯಪುಸ್ತಕ ವಿತರಣೆ, ರಕ್ತದಾನ ಶಿಬಿರ, ಸಾಧಕರಿಗೆ ಸನ್ಮಾನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅವಳಿ ನಗರದ ಎಲ್ಲ ಮುಸ್ಲಿಂ ಜಮಾತ್‌ಗಳ ಮುತವಲ್ಲಿಗಳ ಸಹಯೋಗದಲ್ಲಿ ಮಸೀದಿಗಳ ಮೌಜಿನ್‌ಗಳಿಗೆ ಒಂದು ಜೊತೆ ಬಟ್ಟೆ ನೀಡಿ ಗೌರವಿಸಲಾಗುವುದು. ಸೂಫಿ ಸಂತರೂ ಸೇರಿದಂತೆ ಗಣ್ಯರನ್ನು ಸ್ಥಳೀಯ ಶಾಸಕರ ಸಮ್ಮುಖದಲ್ಲಿ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲು ನಿರ್ಧರಿಸಲಾಗಿದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಪೈಗಂಬರ್ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ. ಆದರೆ ಜಯಂತ್ಯುತ್ಸವದ ಅಂಗವಾಗಿ ಯಾವುದೇ ಡಿಜೆ ಮೆರವಣಿಗೆ ಇರುವುದಿಲ್ಲ. ಸರ್ವಧರ್ಮೀಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಆಸೀಫ್ ದಂಡಿನ, ಯೂಸೂಫ್ ಡಂಬಳ, ಅಹ್ಮದ್ ಖಾಜಿ, ಆರೀಫ್ ಹುನಗುಂದ, ಯೂಸೂಫ್ ಕೊಟ್ಟೂರ, ಕರೀಮ್ ಸುಣಗಾರ, ಅಬೂಬಕರ್ ಅಣ್ಣಿಗೇರಿ, ಯೂಸೂಫ್ ನಮಾಜಿ, ರಝಾ ಡಂಬಳ, ಪಾಷಾ ಕಪಾಲಿ, ಶಮೀರ್ ಜಮಾದಾರ, ಶಬ್ಬಿರ ಅಹ್ಮದ್‌ಸಾಬ್ ಬೋದ್ಲೆಖಾನ್, ರಾಜು ಪೆಂಡಾರಿ, ಉಸ್ಮಾನ ಮಾಳೆಕೊಪ್ಪ, ಇಬ್ರಾಹಿಂ ಕಿಲ್ಲೇದಾರ, ಯಾಸೀನ್ ಖಾಜಿ ಸೇರಿದಂತೆ ಈದ್ ಮಿಲಾದ್ ಕಮಿಟಿ ಪದಾಧಿಕಾರಿಗಳು ಇದ್ದರು.

## ಅಭಿವೃದ್ಧಿ ಹೆಸರಿನಲ್ಲಿ ರಿಯಲ್ ಎಸ್ಟೇಟ್‌ಗೆ ಅವಕಾಶ ಬೇಡ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ವಕಾರುಸಾಲು ಸೇರಿದಂತೆ ವಿವಿಧ ನಗರಸಭೆ ಆಸ್ತಿಗಳನ್ನು ಪ್ರಾಧಿಕಾರಕ್ಕೆ ಹಸ್ತಾಂತರಿಸಿ, ಅಭಿವೃದ್ಧಿಯ ಹೆಸರಿನಲ್ಲಿ ರಿಯಲ್ ಎಸ್ಟೇಟ್ ಚಟುವಟಿಕೆಗಳಿಗೆ ಅವಕಾಶ ನೀಡುವುದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರು ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಪ್ರಮುಖ ಪ್ರದೇಶಗಳಲ್ಲಿರುವ ನಗರಸಭೆ ಆಸ್ತಿಗಳನ್ನು ಅಭಿವೃದ್ಧಿಯ ಹೆಸರಿನಲ್ಲಿ ಪ್ರಾಧಿಕಾರಕ್ಕೆ ನೀಡುವ ಬದಲು ಸ್ಥಳೀಯ ಜನರ ಹಿತಾಸಕ್ತಿಗೆ ಅನುಗುಣವಾಗಿ ಬಳಸಬೇಕು. ನಗರದಲ್ಲಿ ಕುಡಿಯುವ ನೀರು, ಒಳಚರಂಡಿ ಸೇರಿದಂತೆ ಮೂಲಸೌಕರ್ಯಗಳ ಕೊರತೆ ಇದೆ. ಇಂತಹ ಸಮಸ್ಯೆಗಳು ಬಗೆಹರಿಯದೆ ಇರುವಾಗ ದೊಡ್ಡ ವಾಣಿಜ್ಯ ಕಟ್ಟಡ, ಹೋಟೆಲ್ ಹಾಗೂ ರಿಯಲ್ ಎಸ್ಟೇಟ್ ಯೋಜನೆಗಳಿಗೆ ಆದ್ಯತೆ ನೀಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ನಗರಸಭೆಯ ಆಸ್ತಿಗಳು ಸಾರ್ವಜನಿಕರ ಆಸ್ತಿಗಳಾಗಿವೆ. ಅವುಗಳ ಅಭಿವೃದ್ಧಿಯಿಂದ ನಗರಸಭೆಗೆ ಆದಾಯ ಹೆಚ್ಚುವುದರ ಜತೆಗೆ ಸ್ಥಳೀಯರಿಗೆ ಉದ್ಯೋಗ ಹಾಗೂ ವ್ಯಾಪಾರ ಅವಕಾಶಗಳು ಸೃಷ್ಟಿಯಾಗಬೇಕು. ಆದರೆ, ಸಾರ್ವಜನಿಕ ಆಸ್ತಿಗಳನ್ನು ಖಾಸಗಿ ಅಭಿವೃದ್ಧಿ ಚಟುವಟಿಕೆಗಳಿಗೆ ಬಳಸಿದರೆ ಸ್ಥಳೀಯ ಸಣ್ಣ ವ್ಯಾಪಾರಿಗಳು, ಮೆಕ್ಯಾನಿಕ್‌ಗಳು, ಗ್ಯಾರೇಜ್ ಮಾಲೀಕರು ಹಾಗೂ ಸಣ್ಣ ಉದ್ಯಮಿಗಳಿಗೆ ತೊಂದರೆಯಾಗಲಿದೆ ಎಂದರು.




ನಗರದಲ್ಲಿ ಸಣ್ಣ ಗ್ಯಾರೇಜ್, ಕಾರ್ ಪೇಂಟಿಂಗ್, ವೆಲ್ಡಿಂಗ್ ಸೇರಿದಂತೆ ವಿವಿಧ ವೃತ್ತಿಗಳನ್ನು ಮಾಡಿಕೊಂಡು ಜೀವನ ನಡೆಸುತ್ತಿದ್ದ ಅನೇಕ ಕುಟುಂಬಗಳನ್ನು ಸೂಕ್ತ ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಸ್ಥಳಾಂತರಿಸಿರುವುದು ಸರಿಯಲ್ಲ. ಅಭಿವೃದ್ಧಿ ಕಾಮಗಾರಿಗಳಿಂದ ಸ್ಥಳೀಯರಿಗೆ ಉದ್ಯೋಗ ಹಾಗೂ ವ್ಯಾಪಾರ ಅವಕಾಶಗಳು ದೊರೆಯುವಂತಿರಬೇಕು. ಹೊರಗಿನ ದೊಡ್ಡ ಕಂಪನಿಗಳಿಗೆ ಮಾತ್ರ ಅನುಕೂಲವಾಗುವ ರೀತಿಯಲ್ಲಿ ಯೋಜನೆಗಳನ್ನು ರೂಪಿಸಬಾರದು ಎಂದು ಹೇಳಿದರು.

ಗದಗದ ಹತ್ತಿ ವ್ಯಾಪಾರ ಸೇರಿದಂತೆ ಸಾಂಪ್ರದಾಯಿಕ ವಾಣಿಜ್ಯ ಚಟುವಟಿಕೆಗಳಿಗೆ ಐತಿಹಾಸಿಕ ಹಿನ್ನೆಲೆಯಿದೆ. ಸ್ಥಳೀಯ ವ್ಯಾಪಾರ ಮತ್ತು ಉದ್ಯಮಗಳಿಗೆ ಉತ್ತೇಜನ ನೀಡುವ ಬದಲು ಸಾರ್ವಜನಿಕ ಆಸ್ತಿಗಳನ್ನು ರಿಯಲ್ ಎಸ್ಟೇಟ್ ಉದ್ದೇಶಕ್ಕೆ ಬಳಸುವುದು ಗದಗದ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹಲವು ವರ್ಷಗಳಿಂದ ವಿವಿಧ ಕಾಮಗಾರಿಗಳನ್ನು ಕೈಗೊಂಡರೂ ನಗರದ ಮೂಲಭೂತ ಸಮಸ್ಯೆಗಳು ಬಗೆಹರಿದಿಲ್ಲ. ಹೀಗಿರುವಾಗ ಸಾರ್ವಜನಿಕ ಆಸ್ತಿಗಳ ಕುರಿತು ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಜನರ ಅಭಿಪ್ರಾಯ ಪಡೆಯಬೇಕು. ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿ ನಿರ್ಧಾರ ಕೈಗೊಂಡು ಯೋಜನೆ ಮುಂದುವರಿಸಿದರೆ ಜನರನ್ನು ಸಂಘಟಿಸಿ ಹೋರಾಟ ನಡೆಸಲಾಗುವುದು.

ಅಗತ್ಯಬಿದ್ದರೆ ಕಾನೂನು ಹೋರಾಟಕ್ಕೂ ಮುಂದಾಗಬೇಕಾಗುತ್ತದೆ ಎಂದು ವೆಂಕನಗೌಡ ಗೋವಿಂದಗೌಡ್ರು ಎಚ್ಚರಿಸಿದರು. ಈ ಸಂದರ್ಭದಲ್ಲಿ ಎಮ್. ಎಸ್. ಪರ್ವತಗೌಡ್ರ, ಬಸವರಾಜ ಅಪ್ಪಣ್ಣವರ ಸೇರಿದಂತೆ ಅನೇಕರಿದ್ದರು.

## ಹರಿಪುರದಲ್ಲಿ ಸಂಭ್ರಮದ ವೀರಭದ್ರೇಶ್ವರ ಅಗ್ನಿಮಹೋತ್ಸವ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸಮೀಪದ ಹರಿಪುರದಲ್ಲಿ ಶ್ರೀ ವೀರಭದ್ರೇಶ್ವರ ದೇವರ 38ನೇ ವರ್ಷದ ಅಗ್ನಿ ಮಹೋತ್ಸವವು ಶ್ರಾವಣ ಮಾಸದ ದ್ವಾದಶಿ ದಿನವಾದ ಮಂಗಳವಾರ ಸಡಗರ ಸಂಭ್ರಮದಿಂದ ಜರುಗಿತು.

ಸಂಪ್ರದಾಯದಂತೆ ಬೆಳಿಗ್ಗೆ 6 ಗಂಟೆಗೆ ಶ್ರೀ ಶಂಕರಲಿಂಗೇಶ್ವರ ಹಾಗೂ ಶ್ರೀ ವೀರಭದ್ರೇಶ್ವರ ದೇವರಿಗೆ ಎಲೆಪೂಜೆ, ಮಹಾರುದ್ರಾಭಿಷೇಕ ನೆರವೇರಿಸಲಾಯಿತು. ಬಳಿಕ ಬೆಳಿಗ್ಗೆ 8 ಗಂಟೆಗೆ ವೀರಭದ್ರೇಶ್ವರ ಪಲ್ಲಕ್ಕಿ ಉತ್ಸವವು ನಂದಿಧ್ವಜ, ಸಮ್ಮಾಳಗಳು, ಮುತ್ತೈದೆಯರು ಹಾಗೂ ವಿವಿಧ ವಾದ್ಯಗೋಷ್ಠಿಗಳೊಂದಿಗೆ ಪ್ರಮುಖ ಬೀದಿಗಳಲ್ಲಿ ವಿಜೃಂಭಣೆಯಿಂದ ನಡೆಯಿತು.

ಈ ಸಂದರ್ಭದಲ್ಲಿ ಪುರವಂತರು ವೀರಭದ್ರದೇವರ ಒಡಪುಗಳನ್ನು ಹೇಳುತ್ತಾ, ಶಸ್ತ್ರಗಳನ್ನು ಧರಿಸಿ ಭಕ್ತಿಯ ಪರಾಕಾಷ್ಠೆ ಮೆರೆದರು. ಮಧ್ಯಾಹ್ನ 1 ಗಂಟೆಯ ಬಳಿಕ ದೇವಸ್ಥಾನದ ಮುಂಭಾಗದಲ್ಲಿ ಏರ್ಪಡಿಸಿದ್ದ ಅಗ್ನಿಕುಂಡದಲ್ಲಿ ಅಪಾರ ಸಂಖ್ಯೆಯ ಭಕ್ತರು ಅಗ್ನಿಹಾಯ್ದು ಭಕ್ತಿ ಸಮರ್ಪಿಸಿದರು. ಈ ವೇಳೆ ಮೊಳಗಿದ ಹರ ಹರ ಮಹಾದೇವ ಘೋಷ ಮುಗಿಲು ಮುಟ್ಟಿತು. ನಂತರ ಮಹಾಪ್ರಸಾದ ವಿತರಿಸಲಾಯಿತು.

ಅಗ್ನಿಮಹೋತ್ಸವದ ನೇತೃತ್ವವನ್ನು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದರು. ಸಮಿತಿ ಅಧ್ಯಕ್ಷ ಶಂಕ್ರಪ್ಪ ಕಾಳಗಿ, ಚಂದ್ರಶೇಖರ ಕಾಳಗಿ, ಬಸವರಾಜ ದೇಸಾಯಿಪಟ್ಟಿ, ಶಂಭು ಕಾಳಗಿ, ಬಸವರಾಜ ಮೂರಶಿಳ್ಳಿ, ವಿಜಯಕುಮಾರ ದೇಸಾಯಿಪಟ್ಟಿ, ಪ್ರಸನ್ನ ಮೂರಶಿಳ್ಳಿ, ದೇವಪ್ಪ ಗದಗಿನ, ನೀಲಕಂಠಪ್ಪ ಕಾಳಗಿ, ಮಂಜುನಾಥ ಸೊಂಟನೂರ, ವೀರೇಶ ದೇಸಾಯಿಪಟ್ಟಿ, ಗಂಗಪ್ಪ ದೇಸಾಯಿಪಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



### ಈದ್ ಮಿಲಾದ್ ನಿಮಿತ್ತ ವಿಶೇಷ ಲೇಖನ

# ಮಾನವೀಯ ಮೌಲ್ಯಗಳ ಪ್ರತಿಪಾದಕ ಪ್ರವಾದಿ ಮುಹಮ್ಮದ್ (ಸ)

ಇಸ್ಲಾಂ ಜಗದೊಡೆಯನಾದ ಅಲ್ಲಾಹನ ಧರ್ಮ. ಮಾನವರ ಮಾರ್ಗದರ್ಶನಕ್ಕಾಗಿ ಅಲ್ಲಾಹನು ಪ್ರವಾದಿಗಳ ಮೂಲಕ ನೀಡುತ್ತ ಬಂದ ಸಂದೇಶವನ್ನು ಅಂತಿಮ ಪ್ರವಾದಿ ಮುಹಮ್ಮದ್ (ಸ) ಅವರ ಮೂಲಕ ಪರಿಪೂರ್ಣಗೊಳಿಸಿದನು ಎಂಬುದು ಇಸ್ಲಾಮಿನ ನಂಬಿಕೆ.

ಮಾನವ ಕುಲದ ಇತಿಹಾಸದಲ್ಲಿ ಪ್ರೀತಿ, ಕರುಣೆ, ಸಹೋದರತ್ವ, ನ್ಯಾಯ ಮತ್ತು ಮಾನವೀಯತೆಯ ಮೌಲ್ಯಗಳನ್ನು ಸಾರಿದ ಮಹಾನ್ ದಾರ್ಶನಿಕರಲ್ಲಿ ಪ್ರವಾದಿ ಮುಹಮ್ಮದ್ (ಸ) ಅವರು ಅಗ್ರಗಣ್ಯರು.

ವಿವಿಧ ಧರ್ಮಗಳ ಸದಾಶಯಗಳಂತೆ ಇಸ್ಲಾಂ ಧರ್ಮದ ಬೋಧನೆಯಲ್ಲಿಯೂ ಮಾನವೀಯ ಮೌಲ್ಯಗಳಿಗೆ ಮಹತ್ವವಿದೆ. ಪ್ರವಾದಿ (ಸ) ಅವರ ಜೀವನವನ್ನು ಅರಿತುಕೊಳ್ಳುವುದರಿಂದ ನಮ್ಮ ಬದುಕಿನ ಸತ್ವ ಮತ್ತು ಮೌಲ್ಯವನ್ನು ಹೆಚ್ಚಿಸಿಕೊಳ್ಳಬಹುದು. ಅವರ ಜೀವನ ಕೇವಲ ಮುಸ್ಲಿಮರಿಗೆ ಸೀಮಿತವಾದ ಧಾರ್ಮಿಕ ಮಾದರಿಯಲ್ಲ, ಸಮಸ್ತ ಮಾನವಕುಲಕ್ಕೆ ನೈತಿಕ ಬದುಕಿನ ದಾರಿದೀಪವಾಗಿದೆ.

ಕ್ರಿ.ಶ. 571ರಲ್ಲಿ ಅರೇಬಿಯಾದ ಮಕ್ಕಾ ನಗರದಲ್ಲಿ ಅಮೀನಾ ಮತ್ತು ಅಬ್ದುಲ್ಲಾ ದಂಪತಿಯ ಪುತ್ರನಾಗಿ ಮುಹಮ್ಮದ್ (ಸ) ಜನಿಸಿದರು. ಬಾಲ್ಯದಿಂದಲೇ ಸತ್ಯವಂತಿಕೆ, ಪ್ರಾಮಾಣಿಕತೆ ಮತ್ತು ವಿಶ್ವಾಸಾರ್ಹತೆಗೆ ಹೆಸರಾಗಿದ್ದ ಅವರು ಜನರಿಂದ ಅಲ್-ಅಮೀನ್‌ಟಿ ಎಂಬ ಗೌರವದ ಹೆಸರಿನಿಂದ ಕರೆಯಲ್ಪಟ್ಟರು. ಸತ್ಯ ಮತ್ತು ಪ್ರಾಮಾಣಿಕತೆಯೇ ಅವರ ಜೀವನದ ಪ್ರಮುಖ ಸಂದೇಶವಾಗಿತ್ತು.




**ಏಕದೇವತ್ವ ಮತ್ತು ಮಾನವ ಸಮಾನತೆ**

ಪ್ರವಾದಿ (ಸ) ಅವರು ಮನುಷ್ಯರೆಲ್ಲರೂ ದೇವರ ಮುಂದೆ ಸಮಾನರು ಎಂದು ಸಾರಿದರು. ಜಾತಿ, ವರ್ಣ, ಸಂಪತ್ತು, ಅಧಿಕಾರ ಅಥವಾ ಜನ್ಮದ ಆಧಾರದ ಮೇಲೆ ಒಬ್ಬ ಮನುಷ್ಯ ಮತ್ತೊಬ್ಬನಿಗಿಂತ ಶ್ರೇಷ್ಠನಲ್ಲ ಎಂಬ ಮಾನವೀಯ ಸಂದೇಶ ನೀಡಿದರು. ಮನುಷ್ಯನ ಶ್ರೇಷ್ಠತೆ ಅವನ ಜನ್ಮದಲ್ಲಲ್ಲ, ಅವನ ಸದಾಚಾರ, ನೀತಿ ಮತ್ತು ಸತ್ಕರ್ಮಗಳಲ್ಲಿ ಇದೆ ಎಂಬುದನ್ನು ಬೋಧಿಸಿದರು.

**ಕರುಣೆ ಮತ್ತು ಪ್ರೀತಿ**

ಪ್ರವಾದಿ (ಸ) ಅವರ ಬದುಕಿನ ಪ್ರತಿಯೊಂದು ಹಂತದಲ್ಲೂ ಕರುಣೆ ಮತ್ತು ಪ್ರೀತಿ ಎದ್ದು ಕಾಣುತ್ತದೆ. ಬಡವರು, ಅನಾಥರು, ವಿಧವೆಯರು, ದುರ್ಬಲರು ಹಾಗೂ ಸಮಾಜದ ಅಂಚಿನಲ್ಲಿದ್ದವರ ಬಗ್ಗೆ ಅವರು ವಿಶೇಷ ಕಾಳಜಿ ಹೊಂದಿದ್ದರು. ನೆರೆಹೊರೆಯವರ ಹಕ್ಕು ಮತ್ತು ಹೊಣೆಗಾರಿಕೆಗೆ ಮಹತ್ವ ನೀಡಿದರು.

ತನ್ನ ನೆರೆಯವನು ಹಸಿದಿರುವಾಗ ತಾನು ಮಾತ್ರ ಹೊಟ್ಟೆ ತುಂಬಿಸಿಕೊಳ್ಳುವುದು ನಿಜವಾದ ಮಾನವೀಯತೆಯಲ್ಲ ಎಂಬ ಸಂದೇಶವನ್ನು ಸಾರಿದರು.

ಕ್ಷಮೆ ಅವರ ಜೀವನದ ಮತ್ತೊಂದು ಮಹಾನ್ ಗುಣ. ತಮ್ಮ ವಿರುದ್ಧ ಅನ್ಯಾಯ ಮಾಡಿದವರ ಮೇಲೂ ದ್ವೇಷ ಬೆಳೆಸದೆ, ಸಾಧ್ಯವಾದಲ್ಲಿ ಕ್ಷಮೆ ಮತ್ತು ಸೌಹಾರ್ದತೆಯ ದಾರಿಯನ್ನು ಆರಿಸಿದರು. ಮಕ್ಕಾ ವಿಜಯದ ಸಂದರ್ಭದಲ್ಲಿ ತಮ್ಮ ಮೇಲೆ ದೌರ್ಜನ್ಯ ನಡೆಸಿದವರಿಗೂ ಕ್ಷಮೆ ತೋರಿದ ಘಟನೆ ಮಾನವ ಇತಿಹಾಸದಲ್ಲಿನ ಅಪೂರ್ವ ಕ್ಷಮೆಯ ಸಂದೇಶವಾಗಿದೆ.

**ಮಹಿಳೆಯರು, ಬಡವರು ಮತ್ತು ಅನಾಥರ ಕಾಳಜಿ**

ಆ ಕಾಲದ ಸಮಾಜದಲ್ಲಿ ಮಹಿಳೆಯರ ಹಕ್ಕುಗಳು ನಿರ್ಲಕ್ಷ್ಯಕ್ಕೊಳಗಾಗಿದ್ದ ಸಂದರ್ಭದಲ್ಲಿ, ಪ್ರವಾದಿ (ಸ) ಅವರು ಮಹಿಳೆಯರ ಗೌರವ, ಹಕ್ಕು ಮತ್ತು ಮಾನವೀಯ ಸ್ಥಾನಮಾನವನ್ನು ಒತ್ತಿಹೇಳಿದರು. ಹೆಣ್ಣು ಮಕ್ಕಳನ್ನು ಕೀಳಾಗಿ ಕಾಣುವ ಮನೋಭಾವವನ್ನು ವಿರೋಧಿಸಿದರು. ಕುಟುಂಬದಲ್ಲಿ ಪ್ರೀತಿ, ಗೌರವ ಮತ್ತು ಜವಾಬ್ದಾರಿಯನ್ನು ಬೆಳೆಸುವಂತೆ ಬೋಧಿಸಿದರು.

ಅನಾಥರ ಆಸ್ತಿ ಕಬಳಿಸುವುದು, ಬಡವರನ್ನು ಶೋಷಿಸುವುದು, ತೂಕ-ಅಳತೆಯಲ್ಲಿ ಮೋಸ ಮಾಡುವುದು ಹಾಗೂ ವ್ಯಾಪಾರದಲ್ಲಿ ವಂಚಿಸುವುದನ್ನು ಖಂಡಿಸಿದರು.

ದಾನ, ಝಕಾತ್ ಮತ್ತು ನೆರವಿನ ಮೂಲಕ ಸಮಾಜದ ದುರ್ಬಲ ವರ್ಗಗಳ ಬದುಕಿನಲ್ಲಿ ಬೆಳಕು ಮೂಡಿಸುವ ಸಂದೇಶ ನೀಡಿದರು.

**ಶಾಂತಿ, ಜ್ಞಾನ ಮತ್ತು ಸಹಬಾಳ್ವೆ**

ಪ್ರವಾದಿ (ಸ) ಅವರ ಬೋಧನೆಯಲ್ಲಿ ಶಾಂತಿ ಮತ್ತು ನ್ಯಾಯಕ್ಕೆ ಮಹತ್ವವಿತ್ತು. ವಿವಿಧ ಸಮುದಾಯಗಳ ನಡುವೆ ಪರಸ್ಪರ ಗೌರವ, ನ್ಯಾಯಯುತ ಸಂಬಂಧ ಮತ್ತು ಶಾಂತಿಯುತ ಸಹಬಾಳ್ವೆಯನ್ನು ಅವರು ಪ್ರೋತ್ಸಾಹಿಸಿದರು. ಮದೀನಾದಲ್ಲಿ ವಿವಿಧ ಸಮುದಾಯಗಳೊಂದಿಗೆ ಸಾಮಾಜಿಕ ಒಪ್ಪಂದದ ಮೂಲಕ ಬದುಕನ್ನು ವ್ಯವಸ್ಥಿತಗೊಳಿಸಿದ ಅವರ ಪ್ರಯತ್ನವು ಬಹುಸಾಂಸ್ಕೃತಿಕ ಸಮಾಜದಲ್ಲಿ ಸಹಬಾಳ್ವೆಯ ಮಹತ್ವವನ್ನು ತೋರಿಸುತ್ತದೆ.

ಜ್ಞಾನಾರ್ಜನೆಗೂ ಅವರು ಮಹತ್ವ ನೀಡಿದರು. ಓದು, ಚಿಂತನೆ ಮತ್ತು ಜ್ಞಾನದಿಂದ ಮನುಷ್ಯ ತನ್ನ ಬದುಕನ್ನು ಉತ್ತಮಗೊಳಿಸಬೇಕು ಎಂಬ ಸಂದೇಶ ಅವರ ಬೋಧನೆಯ ಪ್ರಮುಖ ಭಾಗವಾಗಿತ್ತು. ಜ್ಞಾನವು ವೈಯಕ್ತಿಕ ಪ್ರಗತಿಗಷ್ಟೇ ಅಲ್ಲ, ಮಾನವ ಕಲ್ಯಾಣಕ್ಕೂ ಬಳಕೆಯಾಗಬೇಕು ಎಂಬ ದೃಷ್ಟಿಕೋನ ಅವರ ಜೀವನದಲ್ಲಿತ್ತು.

ಪ್ರಾಣಿಗಳು, ಸಸ್ಯಗಳು ಮತ್ತು ಪ್ರಕೃತಿಯ ಬಗ್ಗೆ ಕರುಣೆ ತೋರುವ ಸಂದೇಶವೂ ಅವರ ಬೋಧನೆಯಲ್ಲಿ ಕಾಣುತ್ತದೆ. ಭೂಮಿಯ ಮೇಲಿನ ಪ್ರತಿಯೊಂದು ಜೀವಿಯನ್ನೂ ಗೌರವದಿಂದ ಕಾಣಬೇಕು ಎಂಬ ಮನೋಭಾವ ಇಂದಿನ ಪರಿಸರ ಸಂಕಷ್ಟದ ಕಾಲದಲ್ಲಿಯೂ ಅತ್ಯಂತ ಪ್ರಸ್ತುತವಾಗಿದೆ.

**ಇಂದಿನ ಸಮಾಜಕ್ಕೆ ಸಂದೇಶ**

ಇಂದು ಜಗತ್ತು ಧರ್ಮ, ಜಾತಿ, ಭಾಷೆ, ದೇಶ ಮತ್ತು ವಿಚಾರಧಾರೆಗಳ ಹೆಸರಿನಲ್ಲಿ ವಿಭಜನೆಯತ್ತ ಸಾಗುತ್ತಿರುವ ಸಂದರ್ಭದಲ್ಲಿ ಪ್ರವಾದಿ (ಸ) ಅವರ ಜೀವನ ಸಂದೇಶ ಮತ್ತಷ್ಟು ಪ್ರಸ್ತುತವಾಗುತ್ತದೆ.

**ದ್ವೇಷಕ್ಕೆ ಬದಲಾಗಿ ಪ್ರೀತಿ,**
**ಹಿಂಸೆಗೆ ಬದಲಾಗಿ ಶಾಂತಿ,**
**ಅನ್ಯಾಯಕ್ಕೆ ಬದಲಾಗಿ ನ್ಯಾಯ,**
**ಅಹಂಕಾರಕ್ಕೆ ಬದಲಾಗಿ ವಿನಯ,**
**ವೈರತ್ವಕ್ಕೆ ಬದಲಾಗಿ ಕ್ಷಮೆ,**
**ಸ್ವಾರ್ಥಕ್ಕೆ ಬದಲಾಗಿ ಸೇವೆ ಇವೇ ಅವರ ಜೀವನದ ಮಹತ್ವದ ಪಾಠಗಳು.**


ಪ್ರವಾದಿ (ಸ) ಅವರನ್ನು ಗೌರವಿಸುವ ಅತ್ಯುತ್ತಮ ಮಾರ್ಗವೆಂದರೆ ಕೇವಲ ಅವರ ಹೆಸರನ್ನು ಸ್ಮರಿಸುವುದಲ್ಲ, ಅವರು ಪ್ರತಿಪಾದಿಸಿದ ಮಾನವೀಯ ಮೌಲ್ಯಗಳನ್ನು ನಮ್ಮ ನಿತ್ಯ ಬದುಕಿನಲ್ಲಿ ಅಳವಡಿಸಿಕೊಳ್ಳುವುದು. ಇಸ್ಲಾಂ ಧರ್ಮದ ಅಂತರಂಗದಲ್ಲಿ ಶಾಂತಿ, ನ್ಯಾಯ, ಕರುಣೆ ಮತ್ತು ಸೌಹಾರ್ದತೆಗೆ ಮಹತ್ವವಿದೆ. ನ್ಯಾಯಯುತ ಮಾರ್ಗವಿಲ್ಲದೆ ಶಾಂತಿಯನ್ನು ಸಾಧಿಸಲು ಸಾಧ್ಯವಿಲ್ಲ ಎಂಬ ಸಂದೇಶವೂ ಅವರ ಬೋಧನೆಯಲ್ಲಿದೆ.

ಪ್ರವಾದಿ (ಸ) ಅವರ ಜೀವನ ಒಂದು ಧರ್ಮದ ಇತಿಹಾಸ ಮಾತ್ರವಲ್ಲ, ಅದು ಮಾನವೀಯತೆಯ ವಿಶ್ವವಿದ್ಯಾಲಯ. ಸತ್ಯ, ನ್ಯಾಯ, ಕರುಣೆ, ಸಹನೆ, ಕ್ಷಮೆ, ಸಹೋದರತ್ವ ಮತ್ತು ಶಾಂತಿಯ ಮೌಲ್ಯಗಳನ್ನು ಅವರು ತಮ್ಮ ಬದುಕಿನ ಮೂಲಕ ಸಾರಿದರು. ಸಹನೆ, ಪ್ರೀತಿ, ಕ್ಷಮೆ ಮತ್ತು ನ್ಯಾಯದಿಂದ ತಮ್ಮ ಹೃದಯವನ್ನು ಬೆಳಗಿಸಿಕೊಂಡು, ಆ ಬೆಳಕಿನ ಮೂಲಕ ಅಲ್ಲಾಹನ ಸಂದೇಶವನ್ನು ಜನಸಾಮಾನ್ಯರಿಗೆ ತಲುಪಿಸಿದರು.

ಇಂದಿನ ಜಗತ್ತಿಗೆ ಬೇಕಾಗಿರುವುದು ದ್ವೇಷದ ಗೋಡೆಗಳಲ್ಲ ಪ್ರೀತಿಯ ಸೇತುವೆಗಳು. ಭಾರತವೆಂಬ ಹಡಗಿಗೆ ಬುದ್ಧನ ಕರುಣೆ, ಪ್ರವಾದಿ (ಸ) ಅವರ ಸಹೋದರತೆ, ಬಸವಣ್ಣನವರ ಸಮಾನತೆಯ ಚಿಂತನೆ, ಗಾಂಧೀಜಿಯವರ ಶಾಂತಿ ಮತ್ತು ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯದ ಆಶಯಗಳು ದಿಕ್ಕುದೀಪಗಳಾಗಬೇಕು. ಹಲವು ದಾರ್ಶನಿಕರ ಚಿಂತನೆಗಳ ಕುಲುಮೆಯಲ್ಲಿ ನಮ್ಮ ಸಂವಿಧಾನ ರೂಪುಗೊಂಡಿದೆ. ಮನುಷ್ಯನನ್ನು ಮನುಷ್ಯನಾಗಿ ಕಾಣುವ ಹೃದಯವೇ ಈ ದೇಶದ ನಿಜವಾದ ಶಕ್ತಿ.

ಪ್ರವಾದಿ (ಸ) ಅವರ ಯಾವುದೇ ಮೂರ್ತಿ ಅಥವಾ ಭಾವಚಿತ್ರವಿಲ್ಲದಿದ್ದರೂ, ಕೋಟ್ಯಂತರ ಅನುಯಾಯಿಗಳ ಹೃದಯದಲ್ಲಿ ಅವರು ವಿರಾಜಮಾನರಾಗಿದ್ದಾರೆ. ಅವರ ಜೀವನ ಸಂದೇಶ ಭಾವೈಕ್ಯತೆ ಮತ್ತು ಮಾನವೀಯತೆಯ ಬೀಜ ಬಿತ್ತುತ್ತದೆ.

ಮಾನವೀಯತೆಯೇ ಮನುಷ್ಯನ ನಿಜವಾದ ಧರ್ಮ ಎಂಬ ಆಶಯವನ್ನು ಬದುಕಿನಲ್ಲಿ ಸಾಕಾರಗೊಳಿಸುವುದೇ ಪ್ರವಾದಿ ಮುಹಮ್ಮದ್ (ಸ) ಅವರ ಜೀವನಕ್ಕೆ ಸಲ್ಲಿಸುವ ಶ್ರೇಷ್ಠ ಗೌರವ. ಬಹುತ್ವದ ಭಾರತದಲ್ಲಿ ಎಲ್ಲರೂ ಸಮಾನವಾಗಿ ಬಾಳಿ ಬದುಕಲು ನಮ್ಮ ಸಂಬಂಧಗಳು ಗಟ್ಟಿಯಾಗಬೇಕು. ಸ್ವಧರ್ಮನಿಷ್ಠೆ ಮತ್ತು ಪರಧರ್ಮ ಸಹಿಷ್ಣುತೆಯೊಂದಿಗೆ ಬದುಕುವ ಮಾರ್ಗವನ್ನು ಅಳವಡಿಸಿಕೊಳ್ಳಬೇಕು. ಆಗಲೇ ಈದ್ ಮಿಲಾದ್ ಆಚರಣೆಗೆ ನಿಜವಾದ ಅರ್ಥ ಸಿಗುತ್ತದೆ.



**- ಎ.ಎಸ್. ಮಕಾನದಾರ**
**ಕವಿ, ಪ್ರಕಾಶಕರು**
**ನಿರಂತರ ಪ್ರಕಾಶನ, ಗದಗ**

### ಈದ್ ಮಿಲಾದ್ ನಿಮಿತ್ತ ವಿಶೇಷ ಲೇಖನ

# ಅಂತಿಮ ಪ್ರವಾದಿ ಮುಹಮ್ಮದ್ (ಸ): ಮಾನವೀಯತೆಯ ದಾರಿದೀಪ

ಕ್ರಿ.ಶ. 571ರ ರಬೀಉಲ್ ಅವ್ವಲ್ ತಿಂಗಳ 9ನೇ ತಾರೀಖು ಸೋಮವಾರ. ಮಕ್ಕಾ ನಗರದಲ್ಲಿ ಅಬ್ದುಲ್ಲಾ ಮತ್ತು ಅಮೀನಾ ದಂಪತಿಯ ಪುತ್ರನಾಗಿ ಮುಹಮ್ಮದ್ (ಸ) ಜನಿಸಿದರು. ಮಗುವಿನ ಜನನದ ಸುದ್ದಿ ತಿಳಿದು ಓಡೋಡಿ ಬಂದ ದಾಸಿ ಬರ್ಕಾ, ಸರದಾರರೇ, ಶುಭವಾಗಲಿ. ಅಮ್ಮಾ ಚಂದ್ರನಂತಹ ಸುಂದರ ಮಗುವಿಗೆ ಜನ್ಮ ನೀಡಿದ್ದಾರೆ ಎಂದು ಸಂತಸದ ಸುದ್ದಿ ತಿಳಿಸಿದಳು. ಮಗುವನ್ನು ಕಂಡ ಅಬ್ದುಲ್ ಮುತ್ತಲಿಬ್ ಅವರ ಹೃದಯ ಆನಂದದಿಂದ ತುಂಬಿತು. ಅವರು ಅಲ್ಲಾಹನಿಗೆ ಕೃತಜ್ಞತೆ ಸಲ್ಲಿಸಿ, ಈ ಮಗುವನ್ನು ಸಂರಕ್ಷಿಸು ಎಂದು ಪ್ರಾರ್ಥಿಸಿದರು.

ಆದರೆ ಈ ಮುದ್ದು ಬಾಲಕನ ಬದುಕಿನಲ್ಲಿ ಬಾಲ್ಯದಲ್ಲಿಯೇ ದುಃಖದ ಸರಮಾಲೆ ಆರಂಭವಾಯಿತು. ತಂದೆ ಅಬ್ದುಲ್ಲಾ ಅವರನ್ನು ಜನನಕ್ಕೂ ಮುನ್ನವೇ ಕಳೆದುಕೊಂಡಿದ್ದರು. ನಂತರ ತಾಯಿ ಅಮೀನಾ ಅವರನ್ನೂ ಕಳೆದುಕೊಂಡರು. ತಾಯಿಯ ಮೃತದೇಹವನ್ನು ಅಪ್ಪಿಕೊಂಡು ಬಿಕ್ಕಿಬಿಕ್ಕಿ ಅತ್ತ ಬಾಲಕ ಮುಹಮ್ಮದ್ (ಸ) ಅವರಿಗೆ ತಾತ ಅಬ್ದುಲ್ ಮುತ್ತಲಿಬ್ ಆಸರೆಯಾದರು. ಆದರೆ ವಿಧಿಯಾಟದಿಂದ ತಾತನನ್ನೂ ಕಳೆದುಕೊಂಡರು. ಹೀಗೆ ಮುಂದೆ ಜಗತ್ತಿನ ಅನಾಥರಿಗೆ ಆಸರೆಯಾಗಬೇಕಿದ್ದವರು ಸ್ವತಃ ಅನಾಥರ ನೋವನ್ನು ಅನುಭವಿಸಿ ಬೆಳೆದರು.

ಬಾಲ್ಯದಿಂದಲೇ ಮುಹಮ್ಮದ್ (ಸ) ಅವರ ಚಿಂತನೆ ವಿಶಿಷ್ಟವಾಗಿತ್ತು. ಆಡು-ಒಂಟೆಗಳನ್ನು ಮೇಯಿಸುತ್ತಿದ್ದಾಗಲೂ ಇತರ ಬಾಲಕರಂತೆ ಕೇವಲ ಆಟದಲ್ಲಿ ತಲ್ಲೀನರಾಗದೆ, ನೀಲಾಕಾಶ, ಎತ್ತರದ ಪರ್ವತಗಳು, ವಿಶಾಲ ಭೂಮಿ ಮತ್ತು ಪ್ರಕೃತಿಯ ವೈಚಿತ್ರ್ಯವನ್ನು ಗಮನಿಸುತ್ತಿದ್ದರು. ಈ ಆಕಾಶವನ್ನು ಯಾರು ನಿರ್ಮಿಸಿದರು? ಈ ಪರ್ವತಗಳನ್ನು ಯಾರು ಸೃಷ್ಟಿಸಿದರು? ಮನುಷ್ಯನನ್ನು ಸೃಷ್ಟಿಸಿದವನು ಯಾರು? ಎಂಬ ಪ್ರಶ್ನೆಗಳು ಅವರ ಮನಸ್ಸಿನಲ್ಲಿ ಮೂಡುತ್ತಿದ್ದವು. ಸೃಷ್ಟಿಯ ಹಿಂದಿರುವ ಮಹಾನ್ ಸೃಷ್ಟಿಕರ್ತನನ್ನು ಅರಿಯುವ ದಾಹ ಅವರಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿತ್ತು.

ಯೌವನಕ್ಕೆ ಕಾಲಿಟ್ಟ ಮುಹಮ್ಮದ್ (ಸ) ಅವರು ಸತ್ಯ, ಪ್ರಾಮಾಣಿಕತೆ, ವಿವೇಕ, ಸಜ್ಜನಿಕೆ ಮತ್ತು ಉತ್ತಮ ನಡತೆಯಿಂದ ಜನರ ಗೌರವಕ್ಕೆ ಪಾತ್ರರಾದರು. ಏಕಾಂತವಾಸ ಮತ್ತು ಧ್ಯಾನ ಅವರಿಗೆ ಹೆಚ್ಚು ಪ್ರಿಯವಾಗತೊಡಗಿತು. ಜೀವನದ ಉದ್ದೇಶ, ಸೃಷ್ಟಿಯ ರಹಸ್ಯ ಮತ್ತು ಸೃಷ್ಟಿಕರ್ತನ ಕುರಿತು ಅವರು ಆಳವಾಗಿ ಚಿಂತಿಸುತ್ತಿದ್ದರು.

ಮಕ್ಕಾ ನಗರದ ಹೊರವಲಯದಲ್ಲಿರುವ ನೂರ್ ಪರ್ವತದ ಹಿರಾ ಗುಹೆ ಅವರ ಧ್ಯಾನಸ್ಥಳವಾಯಿತು. ಹಗಲಿರಲಿ, ರಾತ್ರಿಯಿರಲಿ, ಅವರು ಅಲ್ಲಿ ಸೃಷ್ಟಿಕರ್ತನ ಧ್ಯಾನ ಮತ್ತು ಆರಾಧನೆಯಲ್ಲಿ ತಲ್ಲೀನರಾಗುತ್ತಿದ್ದರು. ಕೊನೆಗೆ ಕ್ರಿ.ಶ. 610ರಲ್ಲಿ ಅವರ ಜೀವನದ ಮಹತ್ವದ ಘಳಿಗೆ ಬಂದಿತು. ಜಿಬ್ರೀಲ್ (ಅ) ಅವರು ಅವರ ಬಳಿಗೆ ಆಗಮಿಸಿ ಓದಿರಿ ಎಂದು ಹೇಳಿದರು. ನಾನು ಓದು ಬಲ್ಲವನಲ್ಲ ಎಂದು ಮುಹಮ್ಮದ್ (ಸ) ಉತ್ತರಿಸಿದರು. ಬಳಿಕ ಪವಿತ್ರ ಕುರಾನಿನ ಸೂರ ಅಲ್-ಅಲಕ್‌ನ ಮೊದಲ ಐದು ವಚನಗಳು ಅವತೀರ್ಣವಾದವು.

ನಿಮ್ಮನ್ನು ಸೃಷ್ಟಿಸಿದ ನಿಮ್ಮ ಪ್ರಭುವಿನ ನಾಮದೊಂದಿಗೆ ಓದಿರಿ. ಅವನು ಮಾನವನನ್ನು ಹೆಪ್ಪುಗಟ್ಟಿದ ರಕ್ತದ ಪಿಂಡದಿಂದ ಸೃಷ್ಟಿಸಿದನು... ಎಂಬ ದಿವ್ಯವಾಣಿ ಜ್ಞಾನ ಮತ್ತು ಸತ್ಯದ ಹೊಸ ಬೆಳಕನ್ನು ಮಾನವಕುಲಕ್ಕೆ ನೀಡಿತು. ಇದರೊಂದಿಗೆ ಮುಹಮ್ಮದ್ (ಸ) ಅವರು ಅಂತಿಮ ಪ್ರವಾದಿಯಾಗಿ ತಮ್ಮ ಧರ್ಮಪ್ರಚಾರದ ಪವಿತ್ರ ಕಾರ್ಯವನ್ನು ಆರಂಭಿಸಿದರು.

ಆರಂಭದಲ್ಲಿ ಧರ್ಮಪ್ರಚಾರ ಗುಪ್ತವಾಗಿ ನಡೆಯಿತು. ನಂತರ ಅಲ್ಲಾಹನ ಏಕತ್ವದ ಸಂದೇಶವನ್ನು ಬಹಿರಂಗವಾಗಿ ಸಾರಲಾರಂಭಿಸಿದರು. ಅಲ್ಲಾಹನಲ್ಲದೆ ಆರಾಧ್ಯನಿಲ್ಲ ಎಂಬ ಸಂದೇಶದೊಂದಿಗೆ ನಮಾಝು, ಉಪವಾಸ, ಝಕಾತ್ ಮತ್ತು ಹಜ್‌ನ ಮಹತ್ವವನ್ನು ಬೋಧಿಸಿದರು. ಆದರೆ ಅವರ ಸಂದೇಶ ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತವಾಗಿರಲಿಲ್ಲ. ಸತ್ಯ, ನ್ಯಾಯ, ದಯೆ, ಕ್ಷಮೆ, ಸಹೋದರತ್ವ, ಪ್ರಾಮಾಣಿಕತೆ ಮತ್ತು ಮಾನವೀಯತೆಯನ್ನು ಜೀವನದ ಆಧಾರವನ್ನಾಗಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಅನಾಥರು, ಬಡವರು, ದೀನರು ಮತ್ತು ಅಸಹಾಯಕರ ಬಗ್ಗೆ ವಿಶೇಷ ಕಾಳಜಿ ವಹಿಸುವಂತೆ ಹೇಳಿದರು. ಅಹಂಕಾರ, ದ್ವೇಷ, ಅನ್ಯಾಯ ಮತ್ತು ಶೋಷಣೆಯಿಂದ ದೂರವಿದ್ದು, ಪರಸ್ಪರ ಪ್ರೀತಿ ಮತ್ತು ಕರುಣೆಯಿಂದ ಬದುಕುವಂತೆ ಬೋಧಿಸಿದರು. ಅವರ ಜೀವನವೇ ಅವರು ಸಾರಿದ ಸಂದೇಶದ ಪ್ರಾಯೋಗಿಕ ಮಾದರಿಯಾಗಿತ್ತು.

ಸಂಕಷ್ಟ ಬಂದಾಗ ಸಹನೆ, ಅಧಿಕಾರ ಸಿಕ್ಕಾಗ ವಿನಯ, ಸಂಪತ್ತು ದೊರೆತಾಗ ದಾನಶೀಲತೆ, ವಿರೋಧ ಎದುರಾದಾಗ ಕ್ಷಮೆ ಇವೆಲ್ಲ ಮುಹಮ್ಮದ್ (ಸ) ಅವರ ಬದುಕಿನ ಮಹತ್ವದ ಗುಣಗಳಾಗಿದ್ದವು.

ತಮ್ಮ ಅಂತಿಮ ದಿನಗಳಲ್ಲಿಯೂ ಬಡವರು ಮತ್ತು ದೀನರ ಬಗ್ಗೆ ಕಾಳಜಿ ವಹಿಸಿದರು. ತಮ್ಮಲ್ಲಿದ್ದ ಸಂಪತ್ತನ್ನು ದಾನ ಮಾಡಿದರು, ಗುಲಾಮರನ್ನು ಮುಕ್ತಗೊಳಿಸಿದರು. ಕ್ರಿ.ಶ. 632ರಲ್ಲಿ 63ನೇ ವಯಸ್ಸಿನಲ್ಲಿ ಅವರು ಇಹಲೋಕ ತ್ಯಜಿಸಿದರು. ಆದರೆ ಅವರ ದೇಹ ಮಾತ್ರ ಇಹಲೋಕದಿಂದ ಮರೆಯಾಯಿತು,


ಅವರ ಆದರ್ಶ ಮತ್ತು ಸಂದೇಶ ಇಂದಿಗೂ ಕೋಟ್ಯಂತರ ಜನರ ಬದುಕಿಗೆ ದಾರಿದೀಪವಾಗಿದೆ.

ಈದ್ ಮಿಲಾದ್ ಆಚರಣೆಯ ನಿಜವಾದ ಆಶಯವು ಕೇವಲ ಪ್ರವಾದಿಯವರ ಜನನವನ್ನು ಸ್ಮರಿಸುವುದರಲ್ಲಿ ಸೀಮಿತವಾಗಬಾರದು. ಅವರ ಜೀವನದ ಸಂದೇಶವನ್ನು ಅರಿತು, ಸತ್ಯ, ಕರುಣೆ, ಸಹನೆ, ಕ್ಷಮೆ, ಸರಳತೆ ಮತ್ತು ಮಾನವೀಯತೆಯನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ.

ಅನಾಥರ ಕಣ್ಣೀರು ಒರೆಸೋಣ. ಬಡವರ ನೆರವಿಗೆ ನಿಲ್ಲೋಣ. ದ್ವೇಷದ ಬದಲು ಪ್ರೀತಿ, ಅನ್ಯಾಯದ ಬದಲು ನ್ಯಾಯ, ಅಹಂಕಾರದ ಬದಲು ವಿನಯ ಮತ್ತು ಹಿಂಸೆಯ ಬದಲು ಶಾಂತಿಯನ್ನು ಆಯ್ಕೆ ಮಾಡೋಣ. ಇದೇ ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ನಮಗೆ ನೀಡುವ ಮಹತ್ತರ ಸಂದೇಶ.

ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ಮತ್ತು ಸಂದೇಶ ಎಲ್ಲರಿಗೂ ಸನ್ಮಾರ್ಗದ ದಾರಿದೀಪವಾಗಲಿ. ಈದ್ ಮಿಲಾದ್‌ನ ಪವಿತ್ರ ಸಂದರ್ಭದಲ್ಲಿ ಮಾನವೀಯತೆ, ಶಾಂತಿ ಮತ್ತು ಸಹೋದರತ್ವದ ಬೆಳಕು ನಮ್ಮೆಲ್ಲರ ಬದುಕಿನಲ್ಲಿ ಬೆಳಗಲಿ.

**- ಡಾ. ತಯಬಅಲಿ ಅ. ಹೊಂಬಳ**
**ಮಕ್ಕಳ ಸಾಹಿತಿ, ಗದಗ**







**ಗದಗ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಕಪ್ಪತ್ತಗುಡ್ಡ ಪರಿಸರದಲ್ಲಿ ನಡೆದ ಕವಿ ಸಮ್ಮೇಳನದಲ್ಲಿ ಡೋಣಿ ನಂದಿವೇರಿ ಮಠದ ಶಿವಕುಮಾರಸ್ವಾಮಿಗಳನ್ನು ಸನ್ಮಾನಿಸಲಾಯಿತು. ಮಾಜಿ ಸಚಿವ ಎಸ್.ಎಸ್. ಪಾಟೀಲ, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಇತರರು ಉಪಸ್ಥಿತರಿದ್ದರು.**

### ಧರ್ಮವನ್ನು ಪ್ರದರ್ಶನದ ಸ್ಪರ್ಧೆಯಾಗಿಸದೆ, ಬಡವರ ಕಣ್ಣೀರು ಒರೆಸುವ ಸೇವೆಯಾಗಿ ಕಾಣಬೇಕಾದ ಕಾಲ

# ಧರ್ಮದ ಹೆಸರಿನ ಸ್ಪರ್ಧೆಗೆ ಪೈಗಂಬರ್‌ರ ಬದುಕೇ ಉತ್ತರ

ಧರ್ಮದ ಹೆಸರಿನಲ್ಲಿ ಇಂದು ಸ್ಪರ್ಧೆ ಹೆಚ್ಚುತ್ತಿದೆ. ಯಾರು ದೊಡ್ಡವರು, ಯಾರ ಧರ್ಮ ಶ್ರೇಷ್ಠ, ಯಾರ ಆಚರಣೆ ಹೆಚ್ಚು ವೈಭವಯುತ ಎಂಬ ಪೈಪೋಟಿಯ ನಡುವೆ ಮನುಷ್ಯ ಮಾತ್ರ ಎಲ್ಲೋ ಹಿಂದೆ ಸರಿಯುತ್ತಿದ್ದಾನೆ. ಮೆರವಣಿಗೆಗಳು, ಘೋಷಣೆಗಳು, ಸಾಮಾಜಿಕ ಮಾಧ್ಯಮಗಳ ಚರ್ಚೆಗಳ ನಡುವೆ ಹಸಿದವನ ಹೊಟ್ಟೆ, ಅನಾಥನ ಕಣ್ಣೀರು, ಬಡವನ ಬದುಕು ಮತ್ತು ನ್ಯಾಯಕ್ಕಾಗಿ ಕಾಯುತ್ತಿರುವ ಸಾಮಾನ್ಯ ಮನುಷ್ಯನ ನೋವು ಮಾತ್ರ ಹಾಗೆಯೇ ಉಳಿದಿದೆ.

ಇಂತಹ ಸಂದರ್ಭದಲ್ಲಿ ಈದ್ ಮಿಲಾದ್ ಉನ್ ನಬಿ ಕೇವಲ ಧಾರ್ಮಿಕ ಆಚರಣೆಯಾಗಿ ಉಳಿಯಬೇಕೇ? ಅಥವಾ ಪ್ರವಾದಿ ಮಹಮ್ಮದ್ ಪೈಗಂಬರ್ (ಸಲ್ಲಲ್ಲಾಹು ಅಲೈಹಿ ವಸಲ್ಲಂ) ಅವರು ಬದುಕಿ ತೋರಿಸಿದ ನ್ಯಾಯ, ಕರುಣೆ, ಸಮಾನತೆ, ಜ್ಞಾನ ಮತ್ತು ಮಾನವೀಯತೆಯ ದಾರಿಯನ್ನು ನೆನಪಿಸಿಕೊಳ್ಳಬೇಕೇ ಎಂಬುದು ನಮ್ಮ ಕಾಲದ ಮಹತ್ವದ ಚಿಂತನೆಯಾಗಿದೆ.

ಇತಿಹಾಸವನ್ನು ನೆನಪಿಸಿಕೊಳ್ಳುವುದು ಎಂದರೆ ಹಳೆಯ ಘಟನೆಗಳನ್ನು ಪುನರಾವರ್ತಿಸುವುದಲ್ಲ; ಅವು ವರ್ತಮಾನಕ್ಕೆ ನೀಡುವ ಪಾಠವನ್ನು ಅರಿಯುವುದು. ಪ್ರವಾದಿ ಮಹಮ್ಮದ್ ಪೈಗಂಬರ್ (ಸ) ಅವರ ಬದುಕು ಇದೇ ಸಂದೇಶವನ್ನು ನೀಡುತ್ತದೆ.

**ಜ್ಞಾನದ ಮೂಲಕ ಬದಲಾವಣೆಯ ಪಯಣ**

ಇಸ್ಲಾಮಿಕ್ ಪರಂಪರೆಯ ಪ್ರಕಾರ, ಪ್ರವಾದಿ ಮಹಮ್ಮದ್ ಪೈಗಂಬರ್ (ಸ) ಅವರು ಕ್ರಿ.ಶ. 571ರಲ್ಲಿ ಮಕ್ಕಾದಲ್ಲಿ ಜನಿಸಿದರು. ಸತ್ಯನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಜನರ ವಿಶ್ವಾಸ ಗಳಿಸಿ ಅಲ್-ಅಮೀನ್‌ಟಿ ಎಂಬ ಗೌರವ ಪಡೆದರು.

ಸುಮಾರು ನಲವತ್ತು ವರ್ಷ ವಯಸ್ಸಿನಲ್ಲಿ ಹಿರಾ ಗುಹೆಯಲ್ಲಿ ಮೊದಲ ವಹೀ ದೊರೆಯಿತು. ಇಕ್ರಾಟಿ ಎಂಬ ಜ್ಞಾನದ ಕರೆಯೊಂದಿಗೆ ಅವರ ಪ್ರವಾದಿತ್ವದ ಅಧ್ಯಾಯ ಆರಂಭವಾಯಿತು. ಸತ್ಯ, ನ್ಯಾಯ, ಕರುಣೆ, ದಾನ, ಅನಾಥರ ರಕ್ಷಣೆ, ಬಡವರ ಕಾಳಜಿ ಮತ್ತು ಮಾನವ ಘನತೆ ಅವರ ಬೋಧನೆಯ ಪ್ರಮುಖ ಅಂಶಗಳಾಗಿದ್ದವು.

ಆ ಕಾಲದ ಅರೇಬಿಯಾದಲ್ಲಿ ಬುಡಕಟ್ಟು ಪ್ರಭಾವ, ಅಸಮಾನತೆ, ಶೋಷಣೆ ಮತ್ತು ದುರ್ಬಲರ ಮೇಲಿನ ಅನ್ಯಾಯ ಇತ್ತು. ಇಂತಹ




ಪರಿಸ್ಥಿತಿಯಲ್ಲಿ ಪ್ರವಾದಿಯ ಸಂದೇಶ ಧಾರ್ಮಿಕ ಬೋಧನೆಯಷ್ಟೇ ಅಲ್ಲದೆ ಸಾಮಾಜಿಕ ಪರಿವರ್ತನೆಯ ಧ್ವನಿಯಾಯಿತು.

**ಸಹಬಾಳ್ವೆಯ ಸಮಾಜಕ್ಕೆ ಮಾದರಿ**

ಕ್ರಿ.ಶ. 622ರ ಹಿಜ್ರಾ ಬಳಿಕ ಮದೀನಾದಲ್ಲಿ ವಿವಿಧ ಸಮುದಾಯಗಳ ನಡುವೆ ಸಾಮಾಜಿಕ ವ್ಯವಸ್ಥೆ ರೂಪಿಸುವಲ್ಲಿ ಪ್ರವಾದಿ ಪ್ರಮುಖ ಪಾತ್ರ ವಹಿಸಿದರು. ಮದೀನಾ ಒಪ್ಪಂದವು ವಿಭಿನ್ನ ಸಮುದಾಯಗಳ ಸಹಬಾಳ್ವೆ ಮತ್ತು ಪರಸ್ಪರ ಹೊಣೆಗಾರಿಕೆಯ ಮಹತ್ವವನ್ನು ಸಾರುತ್ತದೆ.

ಹುದೈಬಿಯಾ ಒಪ್ಪಂದವು ಸಂಘರ್ಷದ ಸಂದರ್ಭದಲ್ಲಿಯೂ ತಾಳ್ಮೆ, ಸಂಧಾನ ಮತ್ತು ದೂರದೃಷ್ಟಿಗೆ ಮಹತ್ವವಿದೆ ಎಂಬುದನ್ನು ತೋರಿಸಿತು. ಕ್ರಿ.ಶ. 630ರಲ್ಲಿ ಮಕ್ಕಾ ವಿಜಯದ ಬಳಿಕ ಪ್ರತೀಕಾರಕ್ಕಿಂತ ಕ್ಷಮೆಗೆ ಆದ್ಯತೆ ನೀಡಿದ್ದು ಅಧಿಕಾರಕ್ಕಿಂತ ಮಾನವೀಯತೆ ದೊಡ್ಡದು ಎಂಬ ಸಂದೇಶ ನೀಡುತ್ತದೆ.

**ಧರ್ಮದ ನಿಜವಾದ ಶಕ್ತಿ ಸೇವೆಯಲ್ಲಿ**

ಇಂದಿನ ರಾಜಕೀಯ ಪೈಪೋಟಿಯಲ್ಲಿ ಧರ್ಮವನ್ನು ಮತಗಳ ಲೆಕ್ಕಾಚಾರಕ್ಕೆ ಬಳಸುವುದು, ಸಮುದಾಯಗಳ ನಡುವೆ ಅನುಮಾನ ಬಿತ್ತುವುದು ಅಪಾಯಕಾರಿ. ಧರ್ಮದ ನಿಜವಾದ ಶಕ್ತಿ ಪ್ರದರ್ಶನದಲ್ಲಲ್ಲ, ಸೇವೆಯಲ್ಲಿ ಕಾಣಬೇಕು. ಮೆರವಣಿಗೆ ಮತ್ತು ಅಲಂಕಾರದ ಜತೆಗೆ ಬಡ ವಿದ್ಯಾರ್ಥಿಗೆ ಪುಸ್ತಕ, ಹಸಿದವನಿಗೆ ಆಹಾರ, ಅನಾಥನಿಗೆ ನೆರವು ಹಾಗೂ ರೋಗಿಗೆ ಚಿಕಿತ್ಸೆಯ ಸಹಾಯ ದೊರೆತಾಗ ಆಚರಣೆಗೆ ನಿಜವಾದ ಸಾಮಾಜಿಕ ಅರ್ಥ ಬರುತ್ತದೆ. ಯುವಕರು ತಂತ್ರಜ್ಞಾನವನ್ನು ದ್ವೇಷ ಹರಡುವುದಕ್ಕೆ ಬಳಸದೆ ಶಿಕ್ಷಣ, ರಕ್ತದಾನ, ಪರಿಸರ ಸಂರಕ್ಷಣೆ ಮತ್ತು ಸಾಮಾಜಿಕ ಸೇವೆಗೆ ಬಳಸಬೇಕು. ಯಾವುದೇ ಮಾಹಿತಿಯನ್ನು ಹಂಚುವ ಮುನ್ನ ಅದರ ಸತ್ಯಾಸತ್ಯತೆ ಪರಿಶೀಲಿಸುವ ವಿವೇಕವೂ ಬೆಳೆಸಿಕೊಳ್ಳಬೇಕು.

ಈದ್ ಮಿಲಾದ್ ಕೇವಲ ಒಂದು ದಿನದ ಸಂಭ್ರಮವಾಗದೆ, ನಮ್ಮ ಬದುಕನ್ನು ಪರಿಶೀಲಿಸುವ ಸಂದರ್ಭವಾಗಲಿ. ರಾಜಕೀಯದಲ್ಲಿ ನ್ಯಾಯ, ಧರ್ಮದಲ್ಲಿ ಮಾನವೀಯತೆ, ಸಮಾಜದಲ್ಲಿ ಸಮಾನತೆ ಮತ್ತು ಮಾತಿನಲ್ಲಿ ಸತ್ಯ ನೆಲೆಗೊಳ್ಳಲಿ. ಈದ್ ಮಿಲಾದ್‌ನಲ್ಲಿ ಮನೆಗಳು ಮಾತ್ರ ಬೆಳಗದೆ, ಮನುಷ್ಯರ ಬದುಕು ಬೆಳಗಲಿ.



**-ಸಿಕಂದರ ಎಂ. ಆರಿ**, ವಕೀಲರು

## ದೀಪದ ಬೆಳಕಿಗಿಂತ ಬದುಕಿನ ಬೆಳಕು ಮುಖ್ಯ

**ಈದ್ ಮಿಲಾದ್ ಎಂದರೆ ಬೀದಿಗಳಲ್ಲಿ ಬೆಳಗುವ ದೀಪಗಳಷ್ಟೇ ಅಲ್ಲ, ಕತ್ತಲಲ್ಲಿ ಬದುಕುತ್ತಿರುವ ಮನೆಯೊಳಗೆ ಹೊತ್ತಿಸುವ ಆಶೆಯ ದೀಪವೂ ಹೌದು. ಹಸಿದವನಿಗೆ ನೀಡಿದ ಒಂದು ತುತ್ತು, ಅನಾಥನ ತಲೆಯ ಮೇಲೆ ಇಟ್ಟ ಸಾಂತ್ವನದ ಕೈ ಹಾಗೂ ನೋವಿನಲ್ಲಿರುವವನಿಗೆ ನೀಡಿದ ಭರವಸೆಯ ಮಾತು ದೀರ್ಘಕಾಲ ಉಳಿಯುತ್ತವೆ. ಪೈಗಂಬರ್ (ಸ) ಅವರ ಜನ್ಮವನ್ನು ಸ್ಮರಿಸುವ ಈದ್ ಮಿಲಾದ್, ಮನುಷ್ಯನೊಳಗಿನ ಮಾನವೀಯತೆಯನ್ನು ಎಚ್ಚರಿಸುವ ಪವಿತ್ರ ನೆನಪಾಗಲಿ.**

# ಕ್ರಿಮಿನಾಶಕ ಸಿಂಪಡಿಸಿದ ಮೇವು ತಿಂದು ಜಾನುವಾರುಗಳ ಸರಣಿ ಸಾವು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇದ್ದಕ್ಕಿದ್ದಂತೆ ಜಾನುವಾರುಗಳು ಅಸ್ವಸ್ಥಗೊಂಡು ಉಸಿರಾಡಲು ಪರದಾಡುವುದು, ಕೆಲವೇ ಗಂಟೆಗಳಲ್ಲಿ ಒಂದೊಂದಾಗಿ ಸಾವನ್ನಪ್ಪುವುದು... ಕಣ್ಣೆದುರೇ ಬದುಕಿನ ಆಧಾರವಾಗಿದ್ದ ಜಾನುವಾರುಗಳನ್ನು ಕಳೆದುಕೊಂಡ ಮಾಲೀಕರ ಆಕ್ರಂದನ. ತಾಲೂಕಿನ ಮುನಿಯಾನ ತಾಂಡಾದಲ್ಲಿ ಮಂಗಳವಾರ ಸಂಭವಿಸಿದ ಜಾನುವಾರುಗಳ ಸರಣಿ ಸಾವು ಇಡೀ ತಾಂಡಾವನ್ನೇ ಬೆಚ್ಚಿಬೀಳಿಸಿದೆ.

ತಾಂಡಾದಲ್ಲಿ ಸುಮಾರು 3035 ಮನೆಗಳಿದ್ದು, 300ಕ್ಕೂ ಹೆಚ್ಚು ದೇಶಿ ದನ ಹಾಗೂ ಎಮ್ಮೆಗಳಿವೆ. ಬಹುತೇಕ ಕುಟುಂಬಗಳು ಹೈನುಗಾರಿಕೆಯನ್ನೇ ನಂಬಿ ಜೀವನ ಸಾಗಿಸುತ್ತಿದ್ದು, ಒಂದೊಂದು ಮನೆಯಲ್ಲಿ 10ರಿಂದ 30ರವರೆಗೆ ಜಾನುವಾರುಗಳನ್ನು ಸಾಕಲಾಗುತ್ತಿದೆ. ಹಾಲು, ಮೊಸರು, ತುಪ್ಪ ಮಾರಾಟ ಹಾಗೂ ಸೆಗಣಿ ಗೊಬ್ಬರದಿಂದ ಕುಟುಂಬ ನಿರ್ವಹಣೆ ಮಾಡಲಾಗುತ್ತಿದೆ. ಹೀಗಾಗಿ ಏಕಾಏಕಿ ಜಾನುವಾರುಗಳು ಸಾವನ್ನಪ್ಪುತ್ತಿರುವುದು ಕುಟುಂಬಗಳನ್ನು ಆತಂಕಕ್ಕೆ ದೂಡಿದೆ. ಸೋಮವಾರ ಸಂಜೆ ಎಂದಿನಂತೆ ತಾಂಡಾದ ಸುತ್ತಮುತ್ತಲಿನ ಜಮೀನುಗಳಲ್ಲಿ ಮೇಯಲು ತೆರಳಿದ್ದ ಜಾನುವಾರುಗಳು ಬಳಿಕ ಮನೆಗಳಿಗೆ ಮರಳಿದ್ದವು. ಆದರೆ ಮಧ್ಯರಾತ್ರಿ ವೇಳೆಗೆ ಕೆಲವು ಜಾನುವಾರುಗಳು ಇದ್ದಕ್ಕಿದ್ದಂತೆ ಅಸ್ವಸ್ಥಗೊಂಡು ಉಸಿರಾಡಲು ಪರದಾಡುತ್ತಿರುವುದು ಮಾಲೀಕರ ಗಮನಕ್ಕೆ ಬಂದಿದೆ. ಗಾಬರಿಗೊಂಡ ಗ್ರಾಮಸ್ಥರು ನಸುಕಿನ ಜಾವ ಪಶುವೈದ್ಯಕೀಯ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಪಶುವೈದ್ಯಾಧಿಕಾರಿಗಳು ಸಿಬ್ಬಂದಿ ಹಾಗೂ ಅಂಬುಲೆನ್ಸ್ ಸಹಿತ ತಾಂಡಾಕ್ಕೆ ತೆರಳಿ, ಮುಂಜಾಗ್ರತಾ ಕ್ರಮವಾಗಿ ಜಾನುವಾರುಗಳಿಗೆ ರೋಗನಿರೋಧಕ ಚುಚ್ಚುಮದ್ದು ಹಾಗೂ ಸಲೈನ್ ನೀಡಿ ಚಿಕಿತ್ಸೆ ಆರಂಭಿಸಿದ್ದಾರೆ. ಆದರ್ಯೆ ಬಿಸಿಲೇರುತ್ತಿದ್ದಂತೆ ಒಂದೊಂದೇ ಜಾನುವಾರುಗಳು ಸಾವನ್ನಪ್ಪತೊಡಗಿವೆ.

ಮಧ್ಯಾಹ್ನದ ವೇಳೆಗೆ ನಾಲ್ಕು ಆಕಳು, ಎರಡು ಎಮ್ಮೆ ಹಾಗೂ ಎರಡು ಎತ್ತು ಸೇರಿದಂತೆ ಎಂಟಕ್ಕೂ ಹೆಚ್ಚು ಜಾನುವಾರುಗಳು ಮೃತಪಟ್ಟಿವೆ. 10ಕ್ಕೂ ಅಧಿಕ ಜಾನುವಾರುಗಳು ಸಾವು-ಬದುಕಿನ ನಡುವೆ ಹೋರಾಡುತ್ತಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಆತಂಕ ಎದುರಾಗಿದೆ. ಅಸ್ವಸ್ಥಗೊಂಡ ಜಾನುವಾರುಗಳ ಆರೈಕೆಯಲ್ಲಿ ಮಾಲೀಕರು ತೊಡಗಿದ್ದು, ತಾಂಡಾದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಜಾನುವಾರುಗಳನ್ನು ಕಳೆದುಕೊಂಡ ಸಕ್ರವ್ವ ಲಮಾಣಿ, ಮಂಗಲಪ್ಪ ಲಾಲಪ್ಪ ಲಮಾಣಿ, ಸೋಮಣ್ಣ ಲಮಾಣಿ, ಜಾನಪ್ಪ ಲಮಾಣಿ, ರಾಮಣ್ಣ ಲಮಾಣಿ, ಶಿವಪ್ಪ ಲಮಾಣಿ, ಜೇಮ್ಲಪ್ಪ ಲಮಾಣಿ ಸೇರಿದಂತೆ ಹಲವು ಮಾಲೀಕರು ಜಾನುವಾರುಗಳ ಮುಂದೆ ಕುಳಿತು ಕಣ್ಣೀರಿಡುತ್ತಿದ್ದ ದೃಶ್ಯ ಮನಕಲಕುವಂತಿತ್ತು.



ಸೋಮವಾರ ಮೇಯಲು ಹೋದ ನೂರಾರು ಜಾನುವಾರುಗಳು ಕ್ರಿಮಿನಾಶಕ ಸಿಂಪಡಿಸಿದ ಹುಲ್ಲು ಅಥವಾ ಗೋವಿನ ಜೋಳದ ಬೆಳೆಯನ್ನು ತಿಂದಿರುವುದರಿಂದ ವಿಷಪ್ರಾಶನವಾಗಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಆದರೆ ಜಾನುವಾರುಗಳ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕವಷ್ಟೇ ಸಾವಿಗೆ ನಿಖರ ಕಾರಣ ತಿಳಿಯಲಿದೆ ಎಂದು ಪಶುವೈದ್ಯಕೀಯ ಇಲಾಖೆ ತಿಳಿಸಿದೆ.

ಮುನಿಯಾನ ತಾಂಡಾದಲ್ಲಿ ಜಾನುವಾರುಗಳು ಸಾವನ್ನಪ್ಪುತ್ತಿರುವ ಮಾಹಿತಿ ಲಭ್ಯವಾಗಿದೆ. ಬಹುತೇಕ ಜಾನುವಾರುಗಳು ಕ್ರಿಮಿನಾಶಕ ಸಿಂಪಡಿಸಿದ ಹುಲ್ಲು ಅಥವಾ ಗೋವಿನ ಜೋಳದ ಬೆಳೆಯನ್ನು ತಿಂದಿರುವ ಶಂಕೆ ಇದೆ. ಮೃತಪಟ್ಟ ಜಾನುವಾರುಗಳ ಮರಣೋತ್ತರ ಪರೀಕ್ಷೆ ನಡೆಸಿದ ನಂತರವೇ ನಿಖರ ಕಾರಣ ತಿಳಿಯಲಿದೆ. ಅಸ್ವಸ್ಥ ಜಾನುವಾರುಗಳಿಗೆ ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ. ನಿಖರ ಮಾಹಿತಿಗಾಗಿ ಜಾನುವಾರುಗಳ ಹೊಟ್ಟೆಯ ಅಂಶದ ಮಾದರಿಯನ್ನು ಬಾಗಲಕೋಟೆಯಲ್ಲಿನ ಪ್ರಾಣಿ ರೋಗ ತಪಾಸಣಾ ಕೇಂದ್ರಕ್ಕೆ ಕಳುಹಿಸಲಾಗಿದೆ ಎಂದು ಶಿರಹಟ್ಟಿ ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ನಿಂಗಪ್ಪ ಓಲೆಕಾರ ತಿಳಿಸಿದ್ದಾರೆ. ಹೈನುಗಾರಿಕೆಯನ್ನೇ ನಂಬಿ ಬದುಕುತ್ತಿರುವ ಕುಟುಂಬಗಳ ಜೀವನಾಧಾರವೇ ಕಳೆದುಹೋಗಿರುವ ಹಿನ್ನೆಲೆಯಲ್ಲಿ ಸರ್ಕಾರ ತಕ್ಷಣ ಸ್ಪಂದಿಸಬೇಕು. ಮೃತಪಟ್ಟ ಪ್ರತಿ ಜಾನುವಾರಿಗೆ ಕನಿಷ್ಠ ₹30 ಸಾವಿರ ಪರಿಹಾರ ನೀಡಬೇಕು ಎಂದು ಮುಖಂಡ ನೂರಪ್ಪ ಲಮಾಣಿ ಆಗ್ರಹಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

### ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ವತಿಯಿಂದ ನವದೆಹಲಿಯ ಭಾರತ್ ಮಂಡಪದಲ್ಲಿ ನ. 14ರಿಂದ 27ರವರೆಗೆ 45ನೇ ಆವೃತ್ತಿಯ ಭಾರತ ಅಂತರರಾಷ್ಟ್ರೀಯ ವ್ಯಾಪಾರ ಮೇಳ-2026 ಆಯೋಜಿಸಲಾಗುತ್ತಿದೆ. ಈ ವ್ಯಾಪಾರ ಮೇಳವು ಕುಶಲಕರ್ಮಿಗಳು ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳಿಗೆ ತಮ್ಮ ನವೀನ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಲು ಉತ್ತಮ ವೇದಿಕೆಯಾಗಲಿದೆ. ಈ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಉತ್ತಮ ಕುಶಲಕರ್ಮಿಗಳು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಘಟಕಗಳು ಹಾಗೂ ವಿಶೇಷವಾಗಿ ಮಹಿಳಾ ಉದ್ಯಮಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಉದ್ಯಮಿಗಳು ಹಾಗೂ ಕುಶಲಕರ್ಮಿಗಳು ಗದಗ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯಿಂದ ನಿಗದಿತ ಅರ್ಜಿ ಪಡೆದು, ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸೆ. 8ರೊಳಗಾಗಿ ಸಲ್ಲಿಸಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೇವರು, ಧರ್ಮದ ಮೇಲಿನ ನಂಬಿಕೆ ಕಳೆದು ಕೊಳ್ಳುತ್ತಿರುವ ಸಮಾಜ; ಸಿದ್ದಲಿಂಗ ಸ್ವಾಮೀಜಿ

# ಕಲಿಯುಗ ವಿನಾಶದ ಅಂಚಿಗೆ ಬಂದಿದೆ



**ವಿಜಯಸಾಕ್ಷಿ ಸುದ್ದಿ, ಗದಗ**

ದೇವರು, ಧರ್ಮ ಹಾಗೂ ನಂಬಿಕೆ ಕಳೆದುಕೊಳ್ಳುತ್ತಿರುವ ಈ ಕಲಿಯುಗ ವಿನಾಶದ ಅಂಚಿಗೆ ಬಂದು ನಿಂತಿದೆ. ಮಾನವ ಕುಲದ ರಕ್ಷಣೆ ಗುರು, ಧ್ಯಾನ, ದಾನ, ಧರ್ಮ ಹಾಗೂ ದೇವರ ಆರಾಧನೆಯಿಂದ ಮಾತ್ರ ಸಾಧ್ಯ ಎಂದು ಧಾರವಾಡದ ಸಿದ್ದಸುಕ್ಷೇತ್ರ ನಯಾನಗರದ ಶ್ರೀಗುರು ಅಭಿನವ ಸಿದ್ದಲಿಂಗ ಮಹಾಸ್ವಾಮೀಜಿ ಹೇಳಿದರು. ನಗರದ ಒಕ್ಕಲಗೇರಿ ಓಣಿಯ ದ್ಯಾಮವ್ವನಕಟ್ಟಿ ಬಳಿ ನಡೆಯುತ್ತಿರುವ ಗದಗ-ಬೆಟಗೇರಿ ಗ್ರಾಮ ದೇವತೆಗಳಾದ ಶ್ರೀ ದ್ಯಾಮವ್ವ ಮತ್ತು ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರಾ ಮಹೋತ್ಸವದ 6ನೇ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅಧಿಕಾರ, ಜಾತಿ, ಗತ್ತು, ದೌಲತ್ತು ತಾಯಿಯ ಎದುರು ನಡೆಯುವುದಿಲ್ಲ. ತಾಯಿಗೆ ತಲೆಬಾಗಿ ನಡೆದರೆ ತಲೆ ಎತ್ತಿ ಬದುಕುವಂತಹ ಜೀವನವನ್ನು ಆಕೆ ನೀಡುತ್ತಾಳೆ. ದೇವರಿಗೆ ಶರಣಾದರೆ ಬದುಕು ಸುಂದರವಾಗುತ್ತದೆ. ಮಾನವ ಜೀವನದ ನಿಜವಾದ ಸುಖ ದೇವರು ಮತ್ತು ಗುರುವಿನ ಆಶೀರ್ವಾದವನ್ನು ಅವಲಂಬಿಸಿದೆ ಎಂದು ಸಿದ್ದಲಿಂಗ ಸ್ವಾಮೀಜಿ ಹೇಳಿದರು. ಹಿಂದಿನ ಪೂಜ್ಯರು ನುಡಿದಿದ್ದ ಹಲವು ಭವಿಷ್ಯವಾಣಿಗಳು ಇಂದಿನ ಕಾಲದಲ್ಲಿ ಸತ್ಯವಾಗುತ್ತಿವೆ. ಕಲ್ಲುಕೋಳಿ ಕೂಗ್ಯಾವಟಿ ಎಂದರೆ ಮೊಬೈಲ್ ಹಾಗೂ ಜೀವವಿಲ್ಲದ ಹಕ್ಕಿ ಹಾರಾವಟಿ ಎಂದರೆ ವಿಮಾನ ಎಂದು ಅವರು ವ್ಯಾಖ್ಯಾನಿಸಿದರು. ಗವಿಸಿದ್ದೇಶ್ವರ ಶಾಖಾಮಠದ ಪೂಜ್ಯ ಶ್ರೀ ಶಿವಶಾಂತವೀರ ಮರಿಸ್ವಾಮೀಜಿ ಮಾತನಾಡಿ, ಶ್ರೀ ದ್ಯಾಮಮ್ಮ ಮತ್ತು ದುರ್ಗಮ್ಮ ದೇವಿಯರ ಜಾತ್ರೆ ಹರಕೆ ತೀರಿಸುವ ಜತೆಗೆ ಅರಿವಿನ ಹಾಗೂ ಅನ್ನದಾಸೋಹದ ಜಾತ್ರೆಯಾಗಿದೆ. ಇಂದಿನ ಮಕ್ಕಳು ಸಂಸ್ಕಾರ ಮರೆಯುತ್ತಿದ್ದು, ಪಾಲಕರು ಮೊಬೈಲ್‌ನಲ್ಲಿ ಮುಳುಗಿದ್ದಾರೆ. ಮಕ್ಕಳಲ್ಲಿ ಸಂಸ್ಕಾರ ಹಾಗೂ ಅರಿವು ಮೂಡಿಸುವ ಜವಾಬ್ದಾರಿ ಪಾಲಕರ ಮೇಲಿದೆ ಎಂದರು. ದೇವರು ಕೊಟ್ಟಿದ್ದನ್ನು ಹಂಚಿಕೊಂಡು ಅದರಲ್ಲಿ ಸುಖಪಡುವುದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ. ಇದಕ್ಕಿಂತ ಪುಣ್ಯದ ಕಾರ್ಯ ಬೇರೊಂದಿಲ್ಲ ಎಂದು ಶಿವಶಾಂತವೀರ ಮರಿಸ್ವಾಮೀಜಿ ಹೇಳಿದರು.

**ಒಗ್ಗಟ್ಟಿಗೆ ಸಾಕ್ಷಿಯಾದ ಹರಿಜಾತ್ರೆ**

ರತ್ನಾಕರ ವಾಣಿ ದಿನಪತ್ರಿಕೆ ಸಂಪಾದಕ ಜಗದೀಶ ಪೂಜಾರ ಮಾತನಾಡಿ, 12 ವರ್ಷಗಳಿಗೊಮ್ಮೆ ನಡೆಯುವ ಈ ಹರಿಜಾತ್ರೆಯಲ್ಲಿ ದರ್ಶನ ಪಡೆಯುವುದೇ ಸೌಭಾಗ್ಯ. ಪ್ರತಿದಿನ ಭಕ್ತರಿಗೆ ಪ್ರಸಾದ ವ್ಯವಸ್ಥೆ, ವಿಶೇಷ ಸಾಲು ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗಿದೆ. ದಾನಿಗಳು ತನು-ಮನದಿಂದ ಸೇವೆ ಸಲ್ಲಿಸುತ್ತಿದ್ದು, ಹಿರಿಯರ ಮಾರ್ಗದರ್ಶನದಲ್ಲಿ ಯುವಕರು ಹರಿಜಾತ್ರೆಯನ್ನು ಯಶಸ್ವಿಗೊಳಿಸಿದ್ದಾರೆ ಎಂದರು. ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ ಅಧ್ಯಕ್ಷತೆ ವಹಿಸಿದ್ದರು. ಗದಗ ಆಧ್ಯಾತ್ಮ ವಿದ್ಯಾಶ್ರಮದ ಶಿವಶರಣೆ ಶ್ರೀ ನೀಲಮ್ಮತಾಯಿ ಅಸುಂಡಿ, ಫಕ್ಕೀರಪ್ಪ ಹೆಬಸೂರ, ನಿವೃತ್ತ ನ್ಯಾಯಾಧೀಶ ಎಸ್.ಜಿ. ಪಲ್ಲೇದ, ರಾಜಶೇಖರ ಕಲ್ಲೂರ ಸೇರಿದಂತೆ ಗಣ್ಯರು ವೇದಿಕೆಯಲ್ಲಿದ್ದರು. ಇದೇ ಸಂದರ್ಭದಲ್ಲಿ ವಿವಿಧ ಗಣ್ಯರನ್ನು ಸನ್ಮಾನಿಸಲಾಯಿತು.

> ಎಲ್ಲರೂ ಒಗ್ಗೂಡಿ ಕೆಲಸ ಮಾಡಿದರೆ ಏನು ಬೇಕಾದರೂ ಮಾಡಲು ಸಾಧ್ಯ ಎಂಬುದಕ್ಕೆ ಈ ಹರಿಜಾತ್ರೆ ಸಾಕ್ಷಿಯಾಗಿದೆ. ಜಾತಿ-ಮತ ಭೇದ ಮರೆತು ಹಿರಿಯರು, ಕಿರಿಯರು ಒಗ್ಗೂಡಿ ಈ ಪುಣ್ಯದ ಕಾರ್ಯದಲ್ಲಿ ಪಾಲ್ಗೊಂಡಿದ್ದಾರೆ. ಎಲ್ಲರೂ ಒಂದಾಗುವುದಕ್ಕೆ ಈ ಜಾತ್ರೆ ನೆಪವಾಗಿದೆ.
>
> **- ಜಗದೀಶ ಪೂಜಾರ,**
> ಸಂಪಾದಕ, ರತ್ನಾಕರ ವಾಣಿ ದಿನಪತ್ರಿಕೆ

### ಜಿಗಳೂರು ಅಪಘಾತ: ಮೃತಪಟ್ಟ, ಗಾಯಗೊಂಡ

# ಕುಟುಂಬಗಳಿಗೆ ₹14 ಲಕ್ಷ ಪರಿಹಾರ

**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಜಿಗಳೂರು ರಸ್ತೆ ಅಪಘಾತದಲ್ಲಿ ಮೃತಪಟ್ಟ ಹಾಗೂ ಗಾಯಗೊಂಡವರಿಗೆ ಪರಿಹಾರವಾಗಿ ರಾಜ್ಯ ಸರ್ಕಾರ ₹14 ಲಕ್ಷ ಮಂಜೂರು ಮಾಡಿ ಗದಗ ಜಿಲ್ಲಾಧಿಕಾರಿಗಳ ಖಾತೆಗೆ ಜಮಾ ಮಾಡಿರುವುದನ್ನು ಕರ್ನಾಟಕ ಪ್ರಾಂತ ಕೃಷಿಕೂಲಿಕಾರರ ಸಂಘ ಸ್ವಾಗತಿಸಿದೆ. ಸರ್ಕಾರ ಹಾಗೂ ಸ್ಥಳೀಯ ಶಾಸಕರಿಗೆ ಅಭಿನಂದನೆ ಸಲ್ಲಿಸಿರುವ ಸಂಘ, ಪರಿಹಾರದ ಮೊತ್ತವನ್ನು ಸಂತ್ರಸ್ತ ಕುಟುಂಬಗಳಿಗೆ ತ್ವರಿತವಾಗಿ ತಲ್ಯುಪಿಸುವಂತೆ ಆಗ್ರಹಿಸಿದೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳು ಹಾಗೂ ಗಾಯಗೊಂಡವರ ಕುಟುಂಬಗಳು ಈಗಾಗಲೇ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಕೆಲವರು ಚಿಕಿತ್ಸೆಗಾಗಿ ಹಣ ಹೊಂದಿಸಲು ಪರದಾಡುವಂತಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ಮಂಜೂರು ಮಾಡಿರುವ ಪರಿಹಾರದ ಮೊತ್ತವು ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಉಳಿಯದೆ, ಅರ್ಹ ಫಲಾನುಭವಿಗಳ ವೈಯಕ್ತಿಕ ಖಾತೆಗಳಿಗೆ ಶೀಘ್ರವಾಗಿ ಜಮೆಯಾಗಬೇಕಾಗಿದೆ ಎಂದು ಸಂಘ ತಿಳಿಸಿದೆ. ಪರಿಹಾರ್ಯ ಬಿಡುಗಡೆಗೆ ಸಂಬಂಧಿಸಿದ ಪ್ರಕ್ರಿಯೆಗಳನ್ನು ತ್ವರಿತಗೊಳಿಸಿ, ಯಾವುದೇ ಕಾರಣಕ್ಕೂ ಅನಗತ್ಯ ವಿಳಂಬ ಮಾಡಬಾರದು. ಪರಿಹಾರದ ಹಣ ಸಂತ್ರಸ್ತ ಕುಟುಂಬಗಳಿಗೆ ತಕ್ಷಣ ಲಭ್ಯವಾದರೆ, ಚಿಕಿತ್ಸಾ ವೆಚ್ಚ ಹಾಗೂ ಕುಟುಂಬದ ತುರ್ತು ಅಗತ್ಯಗಳನ್ನು ಪೂರೈಸಲು ಅನುಕೂಲವಾಗಲಿದೆ ಎಂದು ಸಂಘ ಅಭಿಪ್ರಾಯಪಟ್ಟಿದೆ.

ಸರ್ಕಾರ ಈಗಾಗಲೇ ಪರಿಹಾರ ಮಂಜೂರು ಮಾಡಿರುವುದರಿಂದ ಫಲಾನುಭವಿಗಳ ಖಾತೆಗೆ ಹಣ ವರ್ಗಾವಣೆಗೆ ಹೆಚ್ಚಿನ ಸಮಯ ತೆಗೆದುಕೊಳ್ಳುವ ಅಗತ್ಯವಿಲ್ಲ. ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಂಡು ಅರ್ಹ ಎಲ್ಲ ಕುಟುಂಬಗಳ ಖಾತೆಗೆ ಪರಿಹಾರದ ಮೊತ್ತ ಜಮೆಯಾಗುವಂತೆ ನೋಡಿಕೊಳ್ಳಬೇಕು ಎಂದು ಕರ್ನಾಟಕ ಪ್ರಾಂತ ಕೃಷಿಕೂಲಿಕಾರರ ಸಂಘ ಆಗ್ರಹಿಸಿದೆ. ಈ ಕುರಿತು ಸಂಘದ ಕಾರ್ಯದರ್ಶಿ ಎಂ.ಎಸ್. ಹಡಪದ ಹಾಗೂ ಮುಖಂಡರಾದ ಬಾಲು ರಾಠೋಡ, ಪೀರು ರಾಠೋಡ, ಫಯಾಜ್ ತೋಟದ, ದಾವಲಸಾಬ ತಾಳಿಕೋಟಿ, ರಾಜಪ್ಪ ಹೊಸಮನಿ, ಮೆಹಬೂಬ್ ಹುನಗುಂದ, ರಾಜಣ್ಣ ಕೇಶಣ್ಣವರ ಪತ್ರಿಕಾ ಹೇಳಿಕೆಯಲ್ಲಿ ಒತ್ತಾಯಿಸಿದ್ದಾರೆ.

### ಜಾತಿಮತದ ಎಲ್ಲೆ ಮೀರಿ ಮಾನವೀಯತೆ, ಸೌಹಾರ್ದತೆ ಬೆಳೆಸುವ ಜಾತ್ರೆಗಳು: ಕೆ.ಎಚ್.ಪಾಟೀಲ

# ಜಾತ್ರೆಗಳು ಸಹಬಾಳ್ವೆಯಿಂದ ಬದುಕಲು ಕಲಿಸುತ್ತವೆ




**ವಿಜಯಸಾಕ್ಷಿ ಸುದ್ದಿ, ಗದಗ**

ಜಾತಿ, ಮತ, ಪಂಥಗಳ ಎಲ್ಲೆ ಮೀರಿ ಮಾನವೀಯತೆ, ಪರಸ್ಪರ ಸೌಹಾರ್ದತೆ ಹಾಗೂ ಸಹಬಾಳ್ವೆಯ ಸಂದೇಶವನ್ನು ಜಾತ್ರೆಗಳು ಸಾರುತ್ತವೆ. ಬದಲಾಗುತ್ತಿರುವ ಸಾಮಾಜಿಕ ಪರಿಸರದಲ್ಲಿ ಜಾತ್ರೆಗಳು ಸಾರುವ ಮೌಲ್ಯಗಳು ಹೊಸ ಸಮಾಜ ಕಟ್ಟಲು ಸಹಕಾರಿಯಾಗಲಿವೆ ಎಂದು ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ಒಕ್ಕಲಗೇರಿ ಓಣಿಯ ದ್ಯಾಮವ್ವನಕಟ್ಟಿ ಬಳಿ 18 ವರ್ಷಗಳ ಬಳಿಕ ನಡೆಯುತ್ತಿರುವ ಗದಗ-ಬೆಟಗೇರಿ ಗ್ರಾಮ ದೇವತೆಗಳಾದ ಶ್ರೀ ದ್ಯಾಮವ್ವ ಮತ್ತು ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರಾ ಮಹೋತ್ಸವದ 6ನೇ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಾತ್ರೆಗಳು ಸಮಾಜದಲ್ಲಿ ರಚನಾತ್ಮಕ ಕಾರ್ಯಗಳಿಗೆ ಹಾಗೂ ಸೇವೆಯ ಮೂಲಕ ಸಾಮಾಜಿಕ ಬದಲಾವಣೆಗೆ ಅವಕಾಶ ಕಲ್ಪಿಸುವ ನೆಪವಾಗಿವೆ. ಆದರೆ ಪದ್ಧತಿ, ಸಂಸ್ಕೃತಿ ಒಂದೆಡೆಯಾದರೆ ಯುವಕರ ನಡೆ ಮತ್ತೊಂದೆಡೆ ಸಾಗುತ್ತಿರುವುದು ವಿಪರ್ಯಾಸ. ನಕಾರಾತ್ಮಕ ಮತ್ತು ಸಕಾರಾತ್ಮಕದ ನಡುವಿನ ಸೂಕ್ಷ್ಮ ಗೆರೆಯನ್ನು ಗಮನಿಸಿ ಯುವ ಸಮುದಾಯ ಮುನ್ನಡೆಯಬೇಕು. ಆಗ ಸಮಾಜದಲ್ಲಿ ಸಹಬಾಳ್ವೆ, ಭ್ರಾತೃತ್ವ ಹಾಗೂ ಒಗ್ಗಟ್ಟು ಬಲಗೊಳ್ಳಲಿದೆ ಎಂದರು.

ಸಂವಿಧಾನದ ಸಮಾನತೆಯ ಆಶಯವನ್ನು ಪಾಲಿಸುವವರು ಇಂದು ಅಗತ್ಯವಾಗಿದ್ದಾರೆ. ಮತ್ತೊಬ್ಬರ ವಿಚಾರಧಾರೆಯನ್ನು ಒಪ್ಪಿ, ಸ್ವೀಕರಿಸಿ, ಗೌರವಿಸಿ ಮುನ್ನಡೆಯುವುದೇ ಭ್ರಾತೃತ್ವದ ಕಲ್ಪನೆ. ಇದನ್ನು ಸಮಾಜ ಸ್ವೀಕರಿಸಿದರೆ ಪ್ರಗತಿ ಸಾಧ್ಯ. ಭ್ರಾತೃತ್ವದ ಭಾವನೆ ವ್ಯಕ್ತಪಡಿಸಲು ಹಿಂಜರಿದರೆ ಸಮಾಜ ನಿರೀಕ್ಷಿಸಿದಷ್ಟು ಬದಲಾವಣೆ ತರಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಜಾತ್ರೆಗಳು ಸಾರುವ ಸಹೋದರತ್ವ, ಭ್ರಾತೃತ್ವ ಮತ್ತು ಮಾನವೀಯತೆಯ ಮೌಲ್ಯಗಳನ್ನು ಆಚರಣೆಗೆ ತರಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಾತ್ರಾ ಕಮಿಟಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಮಾತನಾಡಿದರು.

ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ನಗರಸಭಾ ಸದಸ್ಯರಾದ ಮೆಹಬೂಬಸಾಬ ನದಾಫ್ ಹಾಗೂ ಬರಕತ್ ಅಲಿ ಮುಲ್ಲಾ ಮಾತನಾಡಿ, ಹರಿಜಾತ್ರೆ ಜಿಲ್ಲೆಯಲ್ಲಿ ಅತ್ಯಂತ ಪ್ರಭಾವ ಬೀರಿದೆ. ಇದಕ್ಕೆ ಕಾರಣರಾದ ಎಲ್ಲರೂ ಅಭಿನಂದನಾರ್ಹರು. ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದರೆ ಎಂತಹ ಕಾರ್ಯವನ್ನಾದರೂ ಯಶಸ್ವಿಗೊಳಿಸಬಹುದು ಎಂಬುದಕ್ಕೆ ಜಾತ್ರೆ ನಿದರ್ಶನವಾಗಿದೆ ಎಂದರು.

ಪಂ. ಹೂಲಿ ಆಚಾರ್ಯ ಮಾತನಾಡಿ, ಮಹಾಭಾರತದಲ್ಲಿ ವೀರತ್ವ, ಬುದ್ಧಿ, ಧರ್ಮ, ಲೋಕನೀತಿ ಹಾಗೂ ವೇದಧರ್ಮದ ಸಾರವಿದೆ. ಮಹಾಭಾರತವನ್ನು ಓದುವುದರಿಂದ ಭಾವಶುದ್ಧಿಯಾಗುತ್ತದೆ. ಕರ್ಣನ ತ್ಯಾಗ, ಅರ್ಜುನನ ಶೌರ್ಯ, ಶ್ರೀಕೃಷ್ಣನ ಮಾರ್ಗದರ್ಶನ ಸೇರಿದಂತೆ ಕುರುಕ್ಷೇತ್ರ ಯುದ್ಧದ ಹಲವು ಪ್ರಸಂಗಗಳು ಜೀವನಕ್ಕೆ ಮಾರ್ಗದರ್ಶನ ನೀಡುತ್ತವೆ ಎಂದರು.

ಜಾತ್ರಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಮೋಹನ ಕಮತರ, ಶಿವಯೋಗಿ ತೆಂಗಿನಕಾಯಿ, ಸಿದ್ದಣ್ಣ ಸಂಗನಾಳ, ಬಸಪ್ಪ ವಜ್ರಬಂಡಿ, ವಿನೋದ ಮೊರಬದ, ಸಂತೋಷ ಕಬಾಡರ, ಈರಣ್ಣ ಮೇಟಿ, ಮಂಜುನಾಥ, ಶೇಖಪ್ಪ ಸುನೀತ, ವೆಂಕಣ್ಣ ಈರಣ್ಣ ಹೇಮಾದ್ರಿ, ರವಿ ಹುಡೇದ, ಈಶಪ್ಪ ಸೇರಿದಂತೆ ಗಣ್ಯರು, ಹಿರಿಯರು ಹಾಗೂ ಯುವಕರು ಉಪಸ್ಥಿತರಿದ್ದರು. ಶ್ರೀಮತಿ ವಿಜಯಲಕ್ಷ್ಮಿ ವೀರಶೆಟ್ಟರ ಸ್ವಾಗತಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

> ನಮ್ಮ ಸಂಸ್ಕೃತಿಯೇ ನಮ್ಮ ಹೆಮ್ಮೆ. ಜಾತ್ರೆಗಳು ಸಹಬಾಳ್ವೆಯ ಅವಕಾಶವನ್ನು ಒದಗಿಸುತ್ತವೆ. ಹಿರಿಯರು ಹಾಕಿಕೊಟ್ಟ ಮೌಲ್ಯಗಳ ಅಡಿಯಲ್ಲಿ ನಡೆಯುವ ಮನಸ್ಥಿತಿಯನ್ನು ಬೆಳೆಸಿಕೊಳ್ಳುವ ಸಂಕಲ್ಪವನ್ನು ಜಾತ್ರೆಗಳ ಮೂಲಕ ಅನುಷ್ಠಾನಗೊಳಿಸಬೇಕು.
>
> **- ಕೆ.ಎಚ್. ಪಾಟೀಲ**

# ಈದ್ ಮಿಲಾದ್ ದಿನ ರಾಜ್ಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪವಿತ್ರ ಈದ್ ಮಿಲಾದ್ ದಿನದಂದು ರಾಜ್ಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ ಡ್ರೈ ಡೇ ಘೋಷಿಸುವಂತೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ವತಿಯಿಂದ ಕರ್ನಾಟಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಕುರಿತು ಮುಖ್ಯಮಂತ್ರಿ ಅವರಿಗೆ ಗದಗ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿದ ಮಹಾಸಭಾ ಪದಾಧಿಕಾರಿಗಳು, ಪ್ರವಾದಿ ಹಜರತ್ ಮಹಮ್ಮದ್ (ಸ್ವ) ಅವರ ಪವಿತ್ರ ಜನ್ಮದಿನವಾದ ಈದ್ ಮಿಲಾದ್ ಮುಸ್ಲಿಂ ಸಮುದಾಯಕ್ಕೆ ಅತ್ಯಂತ ಮಹತ್ವದ ದಿನವಾಗಿದೆ ಎಂದು ತಿಳಿಸಿದ್ದಾರೆ. ಪ್ರವಾದಿ ಹಜರತ್ ಮಹಮ್ಮದ್ (ಸ್ವ) ಅವರು ಪ್ರೀತಿ, ಕರುಣೆ, ಶಾಂತಿ, ಸಮಾನತೆ, ಸಹೋದರತ್ವ ಹಾಗೂ ಸೌಹಾರ್ದತೆಯ ಸಂದೇಶ ಸಾರಿದ್ದರು. ಮನುಷ್ಯರೆಲ್ಲರೂ ಒಂದೇ ಮಾನವ ಕುಟುಂಬದವರು ಎಂಬ ಮಹಾನ್ ಸಂದೇಶವನ್ನು ನೀಡಿದ ಅವರು, ಪರಸ್ಪರ ಪ್ರೀತಿ, ಗೌರವ, ಸಹಬಾಳ್ವೆ ಹಾಗೂ ಮಾನವೀಯ ಮೌಲ್ಯಗಳೊಂದಿಗೆ ಬದುಕುವ ಆದರ್ಶವನ್ನು ತಮ್ಮ ಜೀವನದ ಮೂಲಕ ಜಗತ್ತಿಗೆ ತೋರಿಸಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈದ್ ಮಿಲಾದ್ ದಿನದ ಪಾವಿತ್ರ್ಯ ಹಾಗೂ ಮಹತ್ವವನ್ನು ಗೌರವಿಸುವುದರ ಜತೆಗೆ ರಾಜ್ಯದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಹೋದರತ್ವದ ವಾತಾವರಣವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಅಂದು ರಾಜ್ಯಾದ್ಯಂತ ಮದ್ಯ ಮಾರಾಟವನ್ನು ನಿಷೇಧಿಸಿ ಡ್ರೈ ಡೇ ಘೋಷಿಸಬೇಕು ಎಂದು ಮಹಾಸಭಾ ಸರ್ಕಾರವನ್ನು ಒತ್ತಾಯಿಸಿದೆ.

ಇದು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ಬೇಡಿಕೆಯಲ್ಲ. ಶಾಂತಿ, ಮಾನವೀಯತೆ ಹಾಗೂ ಸಾಮಾಜಿಕ ಸೌಹಾರ್ದತೆಯನ್ನು ಗೌರವಿಸುವ ಕರ್ನಾಟಕದ ಸಮಸ್ತ ಜನತೆಯ ಆಶಯವಾಗಿದೆ. ಹೀಗಾಗಿ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ ಈದ್ ಮಿಲಾದ್ ದಿನದಂದು ರಾಜ್ಯಾದ್ಯಂತ ಮದ್ಯ ಮಾರಾಟ ನಿಷೇಧಿಸುವ ಕುರಿತು ಸೂಕ್ತ ಆದೇಶ ಹೊರಡಿಸಬೇಕು ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್. ನಾಗರಕಟ್ಟೆ ಮನವಿ ಮಾಡಿದ್ದಾರೆ.

ಮನವಿಯನ್ನು ಜಿಲ್ಲಾಧಿಕಾರಿಗಳ ಪರವಾಗಿ ಅಪರ ಜಿಲ್ಲಾಧಿಕಾರಿಗಳು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜಾಫರ ಡಾಲಾಯತ, ಮಹಬೂಬ್ ಬಾದಷಾ ಖಾಜಿ, ಪ್ರಧಾನ ಕಾರ್ಯದರ್ಶಿ ರಿಯಾಜ್ ಅಹ್ಮದ್ ದೊಡ್ಡಮನಿ, ಕುತುಬುದ್ದೀನ್ ಶೇಖ, ಅಬ್ದುಲರಜ್ಜಾಕ ಮಂಗಳೂರು, ರಫೀಕ್ ಈಟಿ, ಸಲೀಂ ಕರಡಿ, ಯಾಸಿನ್ ಮುಲ್ಲಾ, ಅಫ್ಜಲ್ ಮನಿಯಾರ್, ಜೋಹರ ಮುಂಡರಗಿ, ಇಮ್ರಾನ್ ತಹಶೀಲ್ದಾರ್, ಮೀರಾಸಾಬ ಇರಕಲ್, ನಿಜಾಮುದ್ದೀನ್ ಕಾಟಾಪುರ್, ರಹೀಂ ಸಾಬ್ ದೊಡ್ಡಮನಿ, ಸಲೀಂ ನಾಲಬಂದ, ಮಕ್ತುಂ ಹುಸೇನ್ ಜಮಾದಾರ್ ಸೇರಿದಂತೆ ಹಲವಾರು ಪದಾಧಿಕಾರಿಗಳು ಉಪಸ್ಥಿತರಿದ್ದರು.



# ಧರ್ಮ, ಸಂಸ್ಕೃತಿ ಉಳಿಸುವಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಪಾತ್ರ ಮಹತ್ವದ್ದು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಆಧುನಿಕತೆಯ ಅಬ್ಬರದ ನಡುವೆಯೂ ಗ್ರಾಮೀಣ ಪ್ರದೇಶಗಳಲ್ಲಿ ನಡೆಯುವ ಜಾತ್ರೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಜನರಲ್ಲಿ ಸಂತಸ ಹೆಚ್ಚಿಸುವುದರ ಜೊತೆಗೆ ನಮ್ಮ ಸಂಸ್ಕೃತಿ ಮತ್ತು ಪರಂಪರೆ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಸಮೀಪದ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಲಿಂ. ಗುರು ಅನ್ನದಾನ ಸ್ವಾಮೀಜಿಗಳ 49ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಭಾನುವಾರ ಬೆಳಗ್ಗೆ ನಡೆದ ಷಟಸ್ಥಲ ಧ್ವಜಾರೋಹಣ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು.

ಪ್ರತಿಯೊಬ್ಬರೂ ಮಾನವ ಧರ್ಮದ ನೆಲೆಗಟ್ಟಿನ ಮೇಲೆ ಬದುಕು ಸಾಗಿಸುತ್ತಿದ್ದಾರೆ. ಜನರ ಭಾವನೆಗಳಿಗೆ ಅನುಗುಣವಾಗಿ ರೂಪುಗೊಂಡಿರುವ ಎಲ್ಲ ಜಾತಿ-ಧರ್ಮಗಳು ಧರ್ಮಬೋಧನೆ ಮಾಡುತ್ತಿವೆ. ವಿವಿಧ ಧರ್ಮಗಳು ನಾಡಿನಲ್ಲಿದ್ದರೂ ಅಂತಿಮವಾಗಿ ಐಕ್ಯಸ್ಥಾನ ಒಂದೇ ಆಗಿದೆ. ನೊಂದ ಜೀವಗಳನ್ನು ಹಸನು ಮಾಡುವ ಶಕ್ತಿಯುಳ್ಳ ನಮ್ಮ ಸಂಸ್ಕೃತಿಯನ್ನು ಅರ್ಥೈಸಿಕೊಳ್ಳಲು ವಿದೇಶಿಗರು ಕೂಡ ಒಲವು ತೋರುತ್ತಿರುವುದು ಹೆಮ್ಮೆಯ ಸಂಗತಿ. ಧರ್ಮದ ಜಾಗೃತಿ ಮೂಡಿಸಿ, ಮೌಲ್ಯಗಳನ್ನು ಉಳಿಸಿ ಬೆಳೆಸುವ ಮೂಲಕ ಬದುಕಿಗೆ ಅರ್ಥ ತಂದುಕೊಡುವಲ್ಲಿ ಪ್ರತಿಯೊಬ್ಬರೂ ಗಮನ ಹರಿಸಬೇಕು ಎಂದು ಹೇಳಿದರು.

ಸಭಾಪತಿ ಜಿ.ಎಸ್. ಪಾಟೀಲ ಮಾತನಾಡಿ, ಪ್ರಸ್ತುತ ಅಪಾರ ಸಂಖ್ಯೆಯ ಯುವಕರು ದುಶ್ಚಟಗಳಿಗೆ ಮಾರುಹೋಗಿ ಅಮೂಲ್ಯ ಜೀವನವನ್ನು ನಾಶಪಡಿಸಿಕೊಳ್ಳುತ್ತಿದ್ದಾರೆ. ಯುವಕರಿಗೆ ಬುದ್ಧಿ ಹೇಳುವ ಮೂಲಕ ಅವರನ್ನು ಮತ್ತೆ ಸರಿದಾರಿಗೆ ತರುವ ಅಗತ್ಯವಿದೆ. ಒಳ್ಳೆಯ ಮಾರ್ಗದಲ್ಲಿ ಮುನ್ನಡೆದಾಗ ಮಾತ್ರ ಜೀವನ ಅರ್ಥಪೂರ್ಣವಾಗುತ್ತದೆ. ಗಳಿಸಿದ್ದನ್ನು ಹಿತಮಿತವಾಗಿ ಬಳಸಿಕೊಂಡು ಪರೋಪಕಾರದ ಮನೋಭಾವದಿಂದ ಸಂತೋಷ ಹಾಗೂ ನೆಮ್ಮದಿಯ ಜೀವನ ನಡೆಸಲು ಸಂಕಲ್ಪಿಸಬೇಕು ಎಂದರು.

ಷಟಸ್ಥಲ ಧ್ವಜಾರೋಹಣ ನೆರವೇರಿಸಿ ಆಶೀರ್ವಚನ ನೀಡಿದ ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಚನ್ನಬಸವ ಸ್ವಾಮೀಜಿ, ಚಂಚಲ ಮನಸ್ಸಿನ ಮೇಲೆ ಹತೋಟಿ ಸಾಧಿಸಿ ಧರ್ಮದ ಮಾರ್ಗದಲ್ಲಿ ಮುನ್ನಡೆಯುವ ಮೂಲಕ ಸಚ್ಚಾರಿತ್ರ್ಯದ ಜೀವನ ಸಾಗಿಸಲು ಪ್ರತಿಯೊಬ್ಬರೂ ಮುಂದಾಗಬೇಕು ಎಂದರು.

ತಾಯಂದಿರು ಮಕ್ಕಳಿಗೆ ಉತ್ತಮ ಸಂಸ್ಕೃತಿ ಮತ್ತು ಸಂಸ್ಕಾರ ನೀಡುವಲ್ಲಿ ಹೆಚ್ಚಿನ ಕಾಳಜಿ ವಹಿಸಬೇಕು. ಇತ್ತೀಚಿನ ದಿನಗಳಲ್ಲಿ ಮಕ್ಕಳು ಪಾಶ್ಚಾತ್ಯ ಸಂಸ್ಕೃತಿಯತ್ತ ಹೆಚ್ಚು ವಾಲುತ್ತಿರುವುದು ದೇಶದ ಸಂಸ್ಕೃತಿ ನಾಶವಾಗಲು ಕಾರಣವಾಗುತ್ತಿದೆ. ಇದನ್ನು ತಡೆಯಲು ಪಾಲಕರು ಮಕ್ಕಳನ್ನು ಹೆಚ್ಚೆಚ್ಚು ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಮಾಡಬೇಕು ಎಂದು ಹೇಳಿದರು.

ಕೊಟ್ಟೂರ ಸ್ವಾಮೀಜಿ, ನಿರಂಜನಪ್ರಭು ಸ್ವಾಮೀಜಿ, ಸಿದ್ದಲಿಂಗ ಸ್ವಾಮೀಜಿ, ಅಭಿನವ ಕಾಡಶಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ತೋಂಟದಾರ್ಯ ಸ್ವಾಮೀಜಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗಣೇಶ ವಿಸರ್ಜನೆಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಭೀಷ್ಮ ಕೆರೆಯಲ್ಲಿ ಚರಂಡಿ ಕೊಳಚೆ ನೀರು ಹಾಗೂ ಹಂದಿ, ನಾಯಿಗಳ ತ್ಯಾಜ್ಯ ಸೇರಿ ನೀರು ಕಲುಷಿತಗೊಂಡಿದ್ದು, ಇಂತಹ ನೀರಿನಲ್ಲಿ ಶ್ರದ್ಧಾಭಕ್ತಿಯಿಂದ ಪೂಜಿಸಿದ ಗಣೇಶ ಮೂರ್ತಿಗಳನ್ನು ವಿಸರ್ಜಿಸುವುದು ಭಕ್ತರ ಭಾವನೆಗಳಿಗೆ ನೋವುಂಟು ಮಾಡುತ್ತಿದೆ. ಹೀಗಾಗಿ ಗಣೇಶ ವಿಸರ್ಜನೆಗೆ ಕೂಡಲೇ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಸುದರ್ಶನ ಚಕ್ರ ಯುವ ಮಂಡಳ ಗದಗ-ಬೆಟಗೇರಿ ನಗರಸಭೆಗೆ ಮನವಿ ಮಾಡಿದೆ.

ಈ ಕುರಿತು ಸೋಮವಾರ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದ ಮಂಡಳದ ಅಧ್ಯಕ್ಷ ರಾಘವೇಂದ್ರ ಹಬೀಬ ಅವರು, ಗಣೇಶ ವಿಸರ್ಜನೆಗೆ ಇನ್ನೂ ಸಾಕಷ್ಟು ಕಾಲಾವಕಾಶವಿರುವುದರಿಂದ ಕೂಡಲೇ ಸೂಕ್ತ ವ್ಯವಸ್ಥೆ ಕೈಗೊಳ್ಳುವಂತೆ ಒತ್ತಾಯಿಸಿದರು.

ಗದಗ ನಗರದಲ್ಲಿ ಹಲವು ವರ್ಷಗಳಿಂದ ಭೀಷ್ಮ ಕೆರೆಯಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆ ಮಾಡುವ ಪದ್ಧತಿ ನಡೆದುಕೊಂಡು ಬಂದಿದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ನಗರದ ಚರಂಡಿ ನೀರು ಹಾಗೂ ಹಂದಿಗಳ ತ್ಯಾಜ್ಯ ನೇರವಾಗಿ ಕೆರೆಗೆ ಸೇರುತ್ತಿದ್ದು, ಕೆರೆಯ ನೀರು ಕಲುಷಿತಗೊಂಡಿದೆ. ಇದರಿಂದ ಕೆರೆಯ ಪಾವಿತ್ರ್ಯವೂ ಹಾಳಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಭಕ್ತರು ಐದು, ಒಂಬತ್ತು, ಹನ್ನೊಂದು, ಇಪ್ಪತ್ತೊಂದು ದಿನಗಳ ಕಾಲ ಗಣೇಶ ಮೂರ್ತಿಗಳನ್ನು ಅತ್ಯಂತ ಶ್ರದ್ಧಾಭಕ್ತಿಯಿಂದ ಪೂಜಿಸಿ, ಕೊನೆಗೆ ಕೊಳಕು ಹಾಗೂ ದುರ್ವಾಸನೆಯ ನೀರಿನಲ್ಲಿ ವಿಸರ್ಜಿಸುವ ಪರಿಸ್ಥಿತಿ ನಿರ್ಮಾಣವಾಗಿರುವುದು ನೋವುಂಟು ಮಾಡುವ ಸಂಗತಿಯಾಗಿದೆ. ಆದ್ದರಿಂದ ಭಕ್ತರ ಭಾವನೆಗಳಿಗೆ ಬೆಲೆ ನೀಡಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

**ಕೃತಕ ಹೊಂಡ ನಿರ್ಮಿಸಲು ಆಗ್ರಹ**

ಭೀಷ್ಮ ಕೆರೆಯ ಪಕ್ಕದಲ್ಲಿಯೇ ಸುಮಾರು 60ಸ100 ಅಡಿ ಅಳತೆಯ ತಾತ್ಕಾಲಿಕ ಕೃತಕ ಹೊಂಡ ನಿರ್ಮಿಸಿ, ಅದರಲ್ಲಿ ಶುದ್ಧ ನೀರು ತುಂಬಿಸುವ ವ್ಯವಸ್ಥೆ ಮಾಡಬೇಕು. ಇದರಿಂದ ಭಕ್ತರು ಯಾವುದೇ ಅಳುಕಿಲ್ಲದೆ ಶ್ರದ್ಧಾಭಕ್ತಿಯಿಂದ ಗಣೇಶ ಮೂರ್ತಿಗಳನ್ನು ವಿಸರ್ಜಿಸಲು ಅನುಕೂಲವಾಗಲಿದೆ.

ಗಣೇಶ ಹಬ್ಬ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಹೊಂಡ ನಿರ್ಮಾಣಕ್ಕೆ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮಂಡಳದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ರಾಘವೇಂದ್ರ ಹಬೀಬ, ಮಾರುತಿ ದಹಿಂಡೆ, ವಿಜಯ ಬನಹಟ್ಟಿ, ರಾಜು ನಾಯ್ಕರ್, ವಿಜಯ ಸೋಳಂಕಿ, ರತ್ನಾ ಕುರುಗೋಡ, ಆಕಾಶ್ ಗುಜ್ಜರ, ಸಾಗರ ಮಡಿವಾಳರ ಸೇರಿದಂತೆ ಹಲವರು ಉಪಸ್ಥಿತರಿದ್ದರು.





### ಕ್ರಿಕೆಟ್‌ನಿಂದ ಉತ್ಸಾಹ, ಹುರುಪು ಹೆಚ್ಚಲಿ | ವೃತ್ತಿಯಲ್ಲೂ ಕ್ರೀಡಾ ಮನೋಭಾವ ಇರಲಿ: ಎಚ್.ಕೆ.ಪಾಟೀಲ

# ಮಾಧ್ಯಮ ಮಿತ್ರರ ಕ್ರೀಡಾಸಕ್ತಿ ಉತ್ತಮ ಬೆಳವಣಿಗೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮಾಧ್ಯಮ ಕ್ಷೇತ್ರದವರು ಕ್ರಿಕೆಟ್ ಲೀಗ್‌ನಲ್ಲಿ ಉತ್ಸಾಹದಿಂದ ಭಾಗವಹಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ಕ್ರೀಡೆಯಲ್ಲಿ ತೊಡಗಿಸಿಕೊಂಡಾಗ ವಯಸ್ಸಿನ ಅಂತರವೇ ಕಾಣಿಸುವುದಿಲ್ಲ. ಕ್ರೀಡೆಯಿಂದ ಉತ್ಸಾಹ, ಹುರುಪು ಹೆಚ್ಚುತ್ತದೆ ಎಂದು ಮಾಜಿ ಸಚಿವ, ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ವ್ಹಿಡಿಎಸ್ ಮೈದಾನದಲ್ಲಿ ಆಯೋಜಿಸಿದ್ದ ಗದಗ ಮೀಡಿಯಾ ಕ್ರಿಕೆಟ್ ಲೀಗ್‌ನ ಫೈನಲ್ ಪಂದ್ಯಕ್ಕೆ ಟಾಸ್ ಮಾಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರಿಕೆಟ್ ಇತ್ತೀಚೆಗೆ ಹೆಚ್ಚು ಜನಪ್ರಿಯವಾಗುತ್ತಿದೆ. ಆಟಗಾರರು ಸಮವಸ್ತ್ರ ಧರಿಸಿ ಮೈದಾನಕ್ಕಿಳಿಯುವುದು ಆಟಗಾರರಿಗಷ್ಟೇ ಅಲ್ಲದೆ ಅವರ ಮಕ್ಕಳು ಹಾಗೂ ಮೊಮ್ಮಕ್ಕಳಿಗೂ ಸಂತಸ ನೀಡುತ್ತದೆ. ಕ್ರೀಡೆ ಮನರಂಜನೆಯ ಜೊತೆಗೆ ಆರೋಗ್ಯಕರ ಚಟುವಟಿಕೆಯೂ ಆಗಿದೆ. ಕ್ರೀಡೆಯ ಮೂಲಕ ಇನ್ನಷ್ಟು ಎತ್ತರಕ್ಕೆ ಬೆಳೆಯಲು ಎಲ್ಲರಿಗೂ ಅವಕಾಶವಿದೆ ಎಂದರು.

ಕ್ರಿಕೆಟ್ ಲೀಗ್ ಆಯೋಜಿಸಲು ಶ್ರಮಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಹಾಗೂ ಪದಾಧಿಕಾರಿಗಳನ್ನು ಅಭಿನಂದಿಸಿದರು.

ಕಾನಿಪ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಜಿಲ್ಲೆಯ ಕಾರ್ಯನಿರತ ಪತ್ರಕರ್ತರಿಗಾಗಿ ಜಿಲ್ಲಾ ಸಂಘದ ವತಿಯಿಂದ ಇದೇ ಮೊದಲ ಬಾರಿಗೆ ಕ್ರಿಕೆಟ್ ಲೀಗ್ ಆಯೋಜಿಸಲಾಗಿದೆ. ಲೀಗ್‌ನ ವಿಜೇತ ತಂಡಕ್ಕೆ ₹5,555 ನಗದು ಹಾಗೂ ಟ್ರೋಫಿ, ರನ್ನರ್ ಅಪ್ ತಂಡಕ್ಕೆ ₹3,333 ನಗದು ಹಾಗೂ ಟ್ರೋಫಿ ನೀಡಲಾಗುವುದು ಎಂದರು.

ನಾಲ್ಕೂ ತಂಡಗಳ ಮಾಲೀಕರು, ಸಂಘದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರ ಸಹಕಾರದಿಂದ ಕ್ರಿಕೆಟ್ ಲೀಗ್ ಯಶಸ್ವಿಯಾಗಿ ಆಯೋಜಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ರವಿಕಾಂತ ಅಂಗಡಿ, ದೇವಪ್ಪ ಲಿಂಗದಾಳ, ಕಾನಿಪ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಅಶೋಕ ಮಂದಾಲಿ, ಸಿದ್ದು ಪಾಟೀಲ, ತಂಡಗಳ ಮಾಲೀಕರಾದ ಜಗದೀಶ್ ಎಸ್.ಪಿ., ಅಜಿತ್ ಹೊಂಬಾಳಿ, ಎಚ್.ಎಂ. ಶರೀಫನವರ್, ಆನಂದ ಸಾಲಿಗ್ರಾಮ, ಆನಂದಯ್ಯ ವಿರಕ್ತಮಠ, ಅನಂತ ಕಾರ್ಕಳ, ಟಿ.ಎನ್. ಬಾಂಡಗೆ, ಸುನಿಲ್ ತೆಂಬದಮನಿ, ಅನಿಲ್ ತೆಂಬದಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಮೈದಾನದಲ್ಲಿ ಪತ್ರಕರ್ತರು ತೋರಿಸುವ ಕ್ರೀಡಾ ಮನೋಭಾವ ವೃತ್ತಿಯಲ್ಲೂ ಕಾಣಿಸಲಿ. ಸಮಾಜವನ್ನು ತಿದ್ದುವ ಬಹುದೊಡ್ಡ ಶಕ್ತಿಯಾಗಿರುವ ಮಾಧ್ಯಮ ಕ್ಷೇತ್ರದವರು ಕ್ರೀಡೆಯ ಮೂಲಕ ಇನ್ನಷ್ಟು ಉತ್ಸಾಹ ಮತ್ತು ಹುರುಪು ಪಡೆದುಕೊಳ್ಳಲಿ.
>
> **- ಎಚ್.ಕೆ. ಪಾಟೀಲ,** ಶಾಸಕ

> ಜಿಲ್ಲೆಯ ಕಾರ್ಯನಿರತ ಪತ್ರಕರ್ತರಿಗಾಗಿ ಇದೇ ಮೊದಲ ಬಾರಿಗೆ ಕ್ರಿಕೆಟ್ ಲೀಗ್ ಆಯೋಜಿಸಲಾಗಿದೆ. ಎಲ್ಲ ತಂಡಗಳ ಮಾಲೀಕರು, ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರ ಸಹಕಾರದಿಂದ ಲೀಗ್ ಯಶಸ್ವಿಯಾಗಿದೆ.
>
> **- ರಾಜು ಎಂ. ಹೆಬ್ಬಳ್ಳಿ,**
> ಜಿಲ್ಲಾಧ್ಯಕ್ಷ, ಕಾನಿಪ ಸಂಘ, ಗದಗ

## ಸಂಕ್ಷಿಪ್ತ ಸುದ್ದಿಗಳು

## ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಅವಕಾಶ ಸೆ. 19ರಂದು ರಾಷ್ಟ್ರೀಯ ಲೋಕ ಅದಾಲತ್

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಸೆ. 19ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ಹಾಗೂ ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜಿ ಸಂಧಾನದ ಮೂಲಕ ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಲೋಕ ಅದಾಲತ್ ಸುವರ್ಣಾವಕಾಶವಾಗಿದೆ. ರಾಜಿ ಸಂಧಾನದಲ್ಲಿ ಪಾಲ್ಗೊಳ್ಳುವ ಮೂಲಕ ಆರ್ಥಿಕ ಹೊರೆ ಹಾಗೂ ಸಮಯದ ಪೋಲಾಗುವಿಕೆಯನ್ನು ತಪ್ಪಿಸಿಕೊಳ್ಳುವುದರ ಜೊತೆಗೆ, ಪರಸ್ಪರ ಬಾಂಧವ್ಯವನ್ನು ಉಳಿಸಿಕೊಳ್ಳಬಹುದು. ಹೀಗಾಗಿ ಸಾರ್ವಜನಿಕರು ತಮ್ಮ ವ್ಯಾಜ್ಯಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ನಾಗವೇಣಿ ಮನವಿ ಮಾಡಿದ್ದಾರೆ. ಗದಗ ಜಿಲ್ಲೆಯಲ್ಲಿ ರಾಜಿ ಸಂಧಾನಕ್ಕೆ ಅರ್ಹವಾಗಿರುವ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಂಎಂಆರ್‌ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜಿ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡಬಲ್ ಪ್ರಕರಣಗಳನ್ನು ಲೋಕ ಅದಾಲತ್‌ಗಾಗಿ ಗುರುತಿಸಲಾಗಿದೆ. ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಬಹುದಾದ ಪ್ರಕರಣಗಳ ಕುರಿತು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರಿಗೆ ಮುಂಚಿತವಾಗಿ ಮಾಹಿತಿ ನೀಡಿ, ರಾಜಿ ಸಂಧಾನದಿಂದ ಆಗುವ ಪ್ರಯೋಜನಗಳನ್ನು ತಿಳಿಸಲಾಗುವುದು. ಪ್ರಕರಣಗಳಿಗೆ ಸಂಬಂಧಿಸಿದ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸೆ. 19ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜಿ ಸಂಧಾನದ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ. 21,22ಕ್ಕೆ ರಾಜ್ಯ ಮಟ್ಟದ ಶಿಕ್ಷಕರ ಸಮ್ಮೇಳನ

**ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪತ್ತಗಿರಿ ಫೌಂಡೇಶನ್ (ರಿ.) ಕಳಸಾಪೂರಗದಗ ಹಾಗೂ ಕಪ್ಪತ್ತಗಿರಿ ಶಿಕ್ಷಣ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದ 2026-27ನೇ ಸಾಲಿನ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಎರಡು ದಿನಗಳ ರಾಜ್ಯ ಮಟ್ಟದ ಶಿಕ್ಷಕರ ಸಮ್ಮೇಳನ ಹಾಗೂ ವಿಚಾರ ಸಂಕಿರಣವನ್ನು ಸೆ.20 ಮತ್ತು 21ರಂದು ಗದಗ ನಗರದಲ್ಲಿ ಆಯೋಜಿಸಲಾಗಿದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಪಠ್ಯದ ಜ್ಞಾನ ನೀಡುವುದರ ಜತೆಗೆ ಜೀವನದ ಮೌಲ್ಯಗಳನ್ನು ತಿಳಿಸಿಕೊಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ.

ಇಂತಹ ನಿಷ್ಠಾವಂತ, ಪ್ರಾಮಾಣಿಕ, ಪ್ರಬುದ್ಧ ಹಾಗೂ ಶೈಕ್ಷಣಿಕ ಪರಿಣಿತಿ ಹೊಂದಿರುವ ಶಿಕ್ಷಕರನ್ನು ಗುರುತಿಸಿ ಗೌರವಿಸುವುದು ಫೌಂಡೇಶನ್‌ನ ಪ್ರಮುಖ ಉದ್ದೇಶವಾಗಿದೆ. ಈ ಉದ್ದೇಶದಿಂದ ಫೌಂಡೇಶನ್ ಪ್ರತಿವರ್ಷ ಶಿಕ್ಷಕರಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಉತ್ತಮ ಶಿಕ್ಷಕರನ್ನು ಗುರುತಿಸಿ ಅವರ ಸೇವೆಯನ್ನು ಗೌರವಿಸುತ್ತಾ ಬಂದಿದೆ. ಗದಗ ಜಿಲ್ಲೆಯ ಗದಗ, ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ, ನರಗುಂದ, ರೋಣ, ಗಜೇಂದ್ರಗಡ ಹಾಗೂ ಗದಗ ಶಹರ ವ್ಯಾಪ್ತಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕ್ರಿಯಾಶೀಲ ಶಿಕ್ಷಕರನ್ನು ಆಯ್ಕೆ ಮಾಡಿ ಪ್ರಶಸ್ತಿ ನೀಡಲಾಗುತ್ತಿದೆ.

ವಿಶೇಷವಾಗಿ, ಈ ವರ್ಷ ರಾಜ್ಯದ ಪ್ರತಿ ಜಿಲ್ಲೆಯಿಂದ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸುವ ಮಹತ್ವದ ಉದ್ದೇಶವನ್ನು ಫೌಂಡೇಶನ್ ಹೊಂದಿದೆ. ಕ್ರಿಯಾಶೀಲ ಹಾಗೂ ಉತ್ತಮ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ಫೌಂಡೇಶನ್ ವತಿಯಿಂದ ಗುರುತಿಸಿ, ಅವರು ಸೇವೆ ಸಲ್ಲಿಸುತ್ತಿರುವ ಶಾಲೆ, ಕಾಲೇಜು ಅಥವಾ ಮನೆ ವಿಳಾಸಕ್ಕೆ ಆಯ್ಕೆ ಪತ್ರವನ್ನು ಅಂಚೆ ಮೂಲಕ ಕಳುಹಿಸಲಾಗುತ್ತದೆ. ಸೆ.20ರಂದು ಭಾನುವಾರ ಹಾಗೂ ಸೆ.21ರಂದು ಸೋಮವಾರ ಎರಡು ದಿನಗಳ ಕಾಲ ಗದಗ ನಗರದಲ್ಲಿ ರಾಜ್ಯ ಮಟ್ಟದ ಶಿಕ್ಷಕರ ಸಮ್ಮೇಳನ ಮತ್ತು ವಿಚಾರ ಸಂಕಿರಣ ನಡೆಯಲಿದೆ ಎಂದು ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಚಂದ್ರಕಲಾ ಮ. ಇಟಗಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಫೌಂಡೇಶನ್ ಸಂಚಾಲಕರಾದ ರಮೇಶ ನಾಯ್ಕ (ಮೊ. 9686611343), ತೋಟಯ್ಯ ಗುಡ್ಡಿಮಠ (ಮೊ. 9901132516) ಹಾಗೂ ಸಂಸ್ಥಾಪಕ ಅಧ್ಯಕ್ಷೆ ಚಂದ್ರಕಲಾ ಮ. ಇಟಗಿಮಠ (ಮೊ. 7795293736) ಅವರನ್ನು ಸಂಪರ್ಕಿಸಬಹುದು.

## ಸಹಕಾರ ಸಂಘದ ನೋಂದಣಿ ರದ್ದತಿ: ಆಕ್ಷೇಪಣೆ ಸಲ್ಲಿಸಲು ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಕಾರ್ಯಾಚರಣೆ ನಡೆಸದೆ ಸ್ಥಗಿತಗೊಂಡಿರುವ ಹಾಗೂ ಸಮಾಪನೆಗೊಳಿಸಲಾಗಿರುವ ಸಹಕಾರ ಸಂಘದ ನೋಂದಣಿ ರದ್ದತಿಗೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಈ ಕುರಿತು ಆಕ್ಷೇಪಣೆ ಸಲ್ಲಿಸಲು ಸಂಬಂಧಪಟ್ಟವರಿಗೆ ಅವಕಾಶ ನೀಡಲಾಗಿದೆ. ಗದಗ ಜಿಲ್ಲೆಯ ಶ್ರೀ ಭುವನೇಶ್ವರಿ ನೇಕಾರರ ಜವಳಿ ಉತ್ಪಾದಕರ ಸಹಕಾರ ಸಂಘ ನಿ., ಬೆಟಗೇರಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸದೇ ಸ್ಥಗಿತಗೊಂಡಿದೆ. ಸುಮಾರು 5ರಿಂದ 10 ವರ್ಷಗಳಿಂದ ಲೆಕ್ಕಪರಿಶೋಧನೆ ನಡೆದಿಲ್ಲ. ನಿಗದಿತ ಅವಧಿಯಲ್ಲಿ ಚುನಾವಣೆ ಜರುಗಿಲ್ಲ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆಯನ್ನೂ ನಡೆಸಿರುವುದಿಲ್ಲ. ಅಲ್ಲದೆ, ಸಂಘವನ್ನು ಪುನಃಶ್ಚೇತನಗೊಳಿಸಲು ಆಡಳಿತ ಮಂಡಳಿ ಸದಸ್ಯರು ಹಾಗೂ ಸಾಮಾನ್ಯ ಸದಸ್ಯರು ಆಸಕ್ತಿ ತೋರಿಸದಿರುವುದು ಕಂಡುಬಂದಿದೆ. ಸಂಘದ ಅಥಾವೆ ಪತ್ರಿಕೆಗಳು ಹಾಗೂ ಆಡಳಿತ ಮಂಡಳಿ ಸದಸ್ಯರ ವಿಳಾಸಗಳು ಲಭ್ಯವಿಲ್ಲದ ಹಿನ್ನೆಲೆಯಲ್ಲಿ ನೋಂದಣಿ ರದ್ದತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ. ಸಂಘದಿಂದ ಯಾರಿಗಾದರೂ ಹಣ ಬರಬೇಕಿದ್ದಲ್ಲಿ, ಸದಸ್ಯರು ಅಥವಾ ಸಾರ್ವಜನಿಕರು ಪಿಗ್ಮಿ ಹಾಗೂ ಠೇವಣಿ ಮಾಡಿದ್ದಲ್ಲಿ, ಸಂಬಂಧಪಟ್ಟವರು ಮೂಲ ದಾಖಲಾತಿಗಳೊಂದಿಗೆ ಕಚೇರಿ ವೇಳೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ 125, ಗದಗ ಇವರನ್ನು ಸಂಪರ್ಕಿಸಬಹುದು.

ಈ ಸಾರ್ವಜನಿಕ ಪ್ರಕಟಣೆ ಹೊರಡಿಸಿದ 7 ದಿನಗಳೊಳಗಾಗಿ ಸಂಬಂಧಪಟ್ಟವರು ಹಾಜರಾಗಿ ಆಕ್ಷೇಪಣೆ ಸಲ್ಲಿಸಬೇಕು. ನಿಗದಿತ ಅವಧಿಯಲ್ಲಿ ಯಾರೂ ಹಾಜರಾಗದಿದ್ದಲ್ಲಿ ಸದರಿ ಸಹಕಾರ ಸಂಘದ ನೋಂದಣಿ ರದ್ದುಗೊಳಿಸಲಾಗುವುದು. ನಂತರ ಉಂಟಾಗುವ ಯಾವುದೇ ಹೊಣೆಗಾರಿಕೆಗೆ ಇಲಾಖೆ ಜವಾಬ್ದಾರಿಯಾಗುವುದಿಲ್ಲ ಎಂದು ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಾವೈಕ್ಯತೆಯ ಬೆಳಕು ಕೃತಿ ಬಿಡುಗಡೆಗೊಳಿಸಿದ ತೋಂಟದ ಸಿದ್ಧರಾಮ ಮಹಾಸ್ವಾಮೀಜಿ

# ಭಾರತದ ಅಸ್ಮಿತೆ ಅದರ ಬಹುತ್ವದಲ್ಲಿದೆ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ಅನೇಕತೆಯಲ್ಲಿ ಏಕತೆಯನ್ನು ಹೊಂದಿರುವ ದೇಶ. ಪ್ರತಿಯೊಂದರಲ್ಲೂ ವೈವಿಧ್ಯತೆಯನ್ನು ಒಳಗೊಂಡಿರುವ ವಿಶ್ವದ ಏಕೈಕ ದೇಶ ಭಾರತ. ಈ ಬಹುತ್ವವೇ ಭಾರತದ ಅಸ್ಮಿತೆಯಾಗಿದೆ ಎಂದು ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿ ಹೇಳಿದರು.

ನಗರದ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ ನಡೆದ 2812ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ಖ್ಯಾತ ವೈದ್ಯ ಡಾ. ಮಹಮ್ಮದ್ ಅಶ್ರಫ್ ದಸ್ತಗಿರಿಸಾಹೇಬ್ ಸಮುದ್ರಿ, ಅವರು ರಚಿಸಿರುವ ಭಾವೈಕ್ಯತೆಯ ಬೆಳಕುಟಿ ಕೃತಿಯನ್ನು ಬಿಡುಗಡೆ ಮಾಡಲಾಯಿತು. ವಿಶ್ವ ಹಿರಿಯರ ದಿನಾಚರಣೆ ಅಂಗವಾಗಿ ಮಾಜಿ ಸಚಿವ ಎಸ್.ಎಸ್. ಪಾಟೀಲ, ನಿವೃತ್ತ ಶಿಕ್ಷಕ ಚೆನ್ನಯ್ಯ ತೋಟಯ್ಯ ಹಿರೇಮಠ ಹಾಗೂ ನಿವೃತ್ತ ಶಿಕ್ಷಕ ಎಸ್.ಎಂ. ವಾಲಿ ಅವರನ್ನು ಗೌರವಿಸಿ ಆಶೀರ್ವದಿಸಲಾಯಿತು.

ಜಗತ್ತಿನ ಹಲವು ಭಾಗಗಳಲ್ಲಿ ಇಂದು ಯುದ್ಧಗಳು ನಡೆಯುತ್ತಿದ್ದು, ಜನರು ಭಯಗ್ರಸ್ತ ವಾತಾವರಣದಲ್ಲಿ ಬದುಕುತ್ತಿದ್ದಾರೆ. ಜಗತ್ತಿನಲ್ಲಿ ಶಾಂತಿ, ನೆಮ್ಮದಿ ಮತ್ತು ಪ್ರೀತಿ ನೆಲೆಸಬೇಕಾದರೆ ಮನುಷ್ಯರ ನಡುವೆ ಭಾವನೆಗಳು ಅರಳಬೇಕು. ಪರಸ್ಪರ ಪ್ರೀತಿ, ದಯೆ ಮತ್ತು ಭ್ರಾತೃತ್ವದ ಭಾವನೆ ಬೆಳೆಸುವ ಅಗತ್ಯವಿದೆ ಎಂದರು.

ವಿವಿಧ ಕಾಲಘಟ್ಟಗಳಲ್ಲಿ ಸಮಾಜದ ಒಳಿತಿಗಾಗಿ ಅನೇಕ ಪ್ರವಾದಿಗಳು, ಸಮಾಜ ಸುಧಾರಕರು ಹಾಗೂ ಹೋರಾಟಗಾರರು ಜನ್ಮತಳೆದಿದ್ದಾರೆ. ಅವರು ತಮ್ಮ ಜೀವನದ ಮೂಲಕ ಇಡೀ ಮನುಕುಲದ ಬಗ್ಗೆ ಪ್ರೀತಿ ಮತ್ತು ದಯೆ ಬೆಳೆಸುವ ಸಂದೇಶ ನೀಡಿದ್ದಾರೆ. ಮುಹಮ್ಮದ್ ಪೈಗಂಬರ್, ಜಗಜ್ಯೋತಿ ಬಸವೇಶ್ವರ, ಬುದ್ಧ, ಮಹಾವೀರ ಸೇರಿದಂತೆ ಮಹನೀಯರ ಆದರ್ಶ ಮತ್ತು ಮೌಲ್ಯಗಳನ್ನು ಇಂದಿನ ಸಮಾಜ ರೂಢಿಸಿಕೊಳ್ಳಬೇಕಾದ ಅಗತ್ಯವಿದೆ. ಇಂತಹ ಮಾನವೀಯ ಮೌಲ್ಯಗಳನ್ನು ಭಾವೈಕ್ಯತೆಯ ಬೆಳಕುಟಿ ಕೃತಿ ಒಳಗೊಂಡಿದೆ ಎಂದು ಹೇಳಿದರು.

ವಿಶ್ವ ಹಿರಿಯರ ದಿನಾಚರಣೆ ಅಂಗವಾಗಿ ಹಿರಿಯರನ್ನು ಗೌರವಿಸಿ ಮಾತನಾಡಿದ ಅವರು, ಕಣ್ಣಿಗೆ ಕಾಣದ ದೇವರಿಗಿಂತ ಕಣ್ಣಿಗೆ ಕಾಣುವ ತಂದೆ-ತಾಯಿ, ಹಿರಿಯರು ಹಾಗೂ ಗುರುಗಳನ್ನು ಗೌರವಿಸುವ ಸಮಾಜವೇ ಸುಸಂಸ್ಕೃತ ಸಮಾಜ. ಹೊಸ ತಲೆಮಾರು ಹಿರಿಯರನ್ನು ಗೌರವಿಸುವ ಹಾಗೂ ಅವರ ಅನುಭವಗಳನ್ನು ಅನುಸರಿಸುವ ಗುಣ ಬೆಳೆಸಿಕೊಳ್ಳಬೇಕು. ಹಳೆ ಬೇರು, ಹೊಸ ಚಿಗುರು ಇದ್ದಾಗಲೇ ಮರ ಸೊಬಗಾಗಿರುವಂತೆ, ಮನೆಯಲ್ಲಿ ಹಿರಿಯರು ಇದ್ದಾಗ ಕುಟುಂಬಕ್ಕೆ ಶೋಭೆ ಬರುತ್ತದೆ ಎಂದರು.

ಕೃತಿ ಪರಿಚಯ ಮಾಡಿದ ಗದಗ ಜಮಾತ್-ಎ-ಇಸ್ಲಾಂ ಅಧ್ಯಕ್ಷ ಎ.ಐ. ಶೇಖ ಮಾತನಾಡಿ, ಭಾವೈಕ್ಯತೆಯ ಬೆಳಕುಟಿ ಎಲ್ಲರನ್ನು ಒಂದುಗೂಡಿಸುವ ಹಾಗೂ ಏಕತೆಯನ್ನು ಸಾಧಿಸುವ ಅಪರೂಪದ ಕೃತಿಯಾಗಿದೆ. ಲೇಖಕ ಡಾ. ಸಮುದ್ರಿ ಅವರು ಭಾರತದ ಬಹುತ್ವವನ್ನು ಎತ್ತಿಹಿಡಿದಿರುವುದರ ಜೊತೆಗೆ, ಮೊದಲು ನಾವೆಲ್ಲರೂ ಭಾರತೀಯರು ಎಂಬ ಭಾವನೆ ಯನ್ನು ಪ್ರತಿಪಾದಿಸಿದ್ದಾರೆ. ಕೃತಿಯನ್ನು ಯುವಕರಿಗೆ ಅರ್ಪಿಸಿರುವುದು ಹೆಮ್ಮೆಯ ಸಂಗತಿ ಎಂದರು.

ಕೃತಿಯ ಲೇಖಕ ಡಾ. ಎಂ.ಡಿ. ಸಮುದ್ರಿ ಮಾತನಾಡಿ, ಕೃತಿ ರಚನೆಗೆ ತಂದೆ -ತಾಯಿ, ಕುಟುಂಬ, ಗುರುಗಳು ಸೇರಿದಂತೆ ಅನೇಕರು ನೀಡಿದ ಸಹಾಯ-ಸಹಕಾರವನ್ನು ಸ್ಮರಿಸಿ, ಅವರಿಗೆ ಚಿರಋಣಿಯಾಗಿರುವುದಾಗಿ ಹೇಳಿದರು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ, ಧರ್ಮಗ್ರಂಥ ಪಠಣವನ್ನು ಕುಮಾರಿ ಸ್ಫೂರ್ತಿ ಸೈದಾಪುರ ಹಾಗೂ ವಚನ ಚಿಂತನವನ್ನು ಪುಷ್ಪಾವತಿ ಮನೋಹರ ಮಾಲಿಪಾಟೀಲ ನೆರವೇರಿಸಿದರು.

> ಜಗತ್ತಿನಲ್ಲಿ ಶಾಂತಿ, ನೆಮ್ಮದಿ ಮತ್ತು ಪ್ರೀತಿ ಮೂಡಬೇಕಾದರೆ ಮನುಷ್ಯರ ಮಧ್ಯೆ ಭಾವಗಳು ಅರಳಬೇಕು. ಮುಹಮ್ಮದ್ ಪೈಗಂಬರ್, ಬಸವೇಶ್ವರ, ಬುದ್ಧ, ಮಹಾವೀರ ಸೇರಿದಂತೆ ಮಹನೀಯರ ಮಾನವೀಯ ಆದರ್ಶ ಮತ್ತು ಮೌಲ್ಯಗಳನ್ನು ನಾವು ಜೀವನದಲ್ಲಿ ರೂಢಿಸಿಕೊಳ್ಳಬೇಕಾದ ಅಗತ್ಯವಿದೆ.
> – ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿ

ದಾಸೋಹ ಸೇವೆಯನ್ನು ವಿವಿಧ ಕುಟುಂಬಗಳ ವತಿಯಿಂದ ಕೈಗೊಳ್ಳಲಾಯಿತು.

ಶರಣೆ ಗಿರಿಜಕ್ಕ ಧರ್ಮರಡ್ಡಿ ಅವರು ಶರಣರು ಕಂಡ ಅನಾದಿ ಬಸವಣ್ಣಟಿ ವಿಷಯದ ಕುರಿತು ಪ್ರವಚನ ನೀಡಿದರು. ಹಿರಿಯರಾದ ಡಾ. ಜಿ.ಬಿ. ಪಾಟೀಲ, ಶಿವನಗೌಡ ಗೌಡರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ವೀ. ಪುರದ ಸ್ವಾಗತಿಸಿದರು. ಶಿವಾನುಭವ ಸಮಿತಿಯ ಚೇರ್ಮನ್ ಡಾ. ರಮೇಶ ಮ. ಕಲ್ಲನಗೌಡರ ಕಾರ್ಯಕ್ರಮ ನಿರೂಪಿಸಿದರು.

## ಕಪ್ಪತಗುಡ್ಡದ ಮಡಿಲಲ್ಲಿ ಕವಿಗಳ ಸಮಾಗಮ; ಕವಿತೆಗಳ ಕಲರವ!



**ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯ ಪರಿಸರದ ಕೂಸು. ಪ್ರಕೃತಿಯ ಎಲ್ಲ ಅಂಶಗಳನ್ನು ಒಳಗೊಂಡೇ ಮಾನವ ರೂಪುಗೊಂಡಿದ್ದು, ಪರಿಸರದಲ್ಲಿನ ಪ್ರತಿಯೊಂದು ಚಟುವಟಿಕೆಯ ಪ್ರಭಾವವೂ ಮನುಷ್ಯನ ದೇಹದ ಮೇಲಾಗುತ್ತದೆ. ಹೀಗಾಗಿ ಕವಿ ಸದಾ ಪರಿಸರ ಪ್ರೇಮ ಬೆಳೆಸಿಕೊಂಡು, ತನ್ನ ಕವಿತೆಗಳ ಮೂಲಕ ಪ್ರಕೃತಿಯ ಋಣ ತೀರಿಸುವ ಪ್ರಯತ್ನ ಮಾಡಬೇಕು. ಕವಿಯಲ್ಲಿ ಪರಿಸರ ಪ್ರಜ್ಞೆ ಸದಾ ಜಾಗೃತವಾಗಿರಬೇಕು ಹಾಗೂ ಅದು ಕಾವ್ಯದಲ್ಲಿ ಪ್ರತಿಬಿಂಬಿಸಬೇಕು ಎಂದು ಸಾಹಿತಿ ಡಿ.ವಿ. ಬಡಿಗೇರ ಹೇಳಿದರು.

ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ವಿವಿಧ ತಾಲೂಕುಗಳ ಕನ್ನಡ ಸಾಹಿತ್ಯ ಪರಿಷತ್ತುಗಳ ಆಶ್ರಯದಲ್ಲಿ ಕಪ್ಪತಗುಡ್ಡದ ಸೆರಗಿನ ದೇವರೆಡ್ಡಿ ಅಗಸನಕೊಪ್ಪ ಕೃಷಿ ಆಶ್ರಮದಲ್ಲಿ ನಡೆದ ಜಿಲ್ಲಾ ಮಟ್ಟದ ಕವಿ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಕೃತಿಯ ಆರಾಧನೆಯನ್ನು ಎಲ್ಲ ಕವಿಗಳು ಮಾಡಿಕೊಂಡು ಬಂದಿದ್ದಾರೆ. ಕುವೆಂಪು ಹಾಗೂ ಬೇಂದ್ರೆ ಅವರ ಕಾವ್ಯಗಳಲ್ಲಿ ಪ್ರಕೃತಿ ಪ್ರೇಮ ಹಾಸುಹೊಕ್ಕಾಗಿದೆ. ಪ್ರಕೃತಿ ಯಲ್ಲಿ ನಿತ್ಯ ನಡೆಯುವ ಕ್ರಿಯೆಗಳನ್ನು ಪ್ರತಿಮೆ ಹಾಗೂ ರೂಪಕಗಳನ್ನಾಗಿಸಿಕೊಂಡು ಅವರು ಅದ್ಭುತ ಕಾವ್ಯವನ್ನು ಸೃಷ್ಟಿಸಿದ್ದಾರೆ ಎಂದು ಬಡಿಗೇರ ತಿಳಿಸಿದರು. ಇದೇ ಸಂದರ್ಭ ದಲ್ಲಿ ಕುವೆಂಪು ಅವರ ಪಕ್ಷಿಕಾಶಿಟಿ ಕವಿತೆಗಳನ್ನು ವಾಚಿಸಿದರು.

ಸಾನಿಧ್ಯ ವಹಿಸಿದ್ದ ಡೋಣಿ ನಂದಿವೇರಿ ಮಠದ ಶ್ರೀ ಶಿವಕುಮಾರ ಸ್ವಾಮಿಗಳು ಮಾತನಾಡಿ, ಕಾವ್ಯ, ಸಾಹಿತ್ಯ ಹಾಗೂ ಕವನಗಳು ಕವಿಯ ಒಳತುಡಿತದಿಂದ ರೂಪುಗೊಳ್ಳುತ್ತವೆ. ಪರಿಸರದಿಂದ ದೊರೆಯುವ ಏಕಾಂತತೆ ಕವನ ರಚನೆಗೆ ಪೂರಕವಾಗಿರುತ್ತದೆ ಎಂದರು.

ಮನುಷ್ಯ ಪರಿಸರದಿಂದ ದೂರವಾಗುತ್ತಾ ರೋಗಗಳನ್ನು ಹತ್ತಿರ ಮಾಡಿಕೊಳ್ಳುತ್ತಿದ್ದಾನೆ. ಕವಿಗಳು ಕಪ್ಪತಗುಡ್ಡದ ಪರಿಸರದ ಮಡಿಲಿಗೆ ಆಗಮಿಸಿರುವುದು ತವರುಮನೆಗೆ ಬಂದಂತಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಹಿರಿಯ ಕವಿಗಳು ಕಿರಿಯ ಕವಿಗಳನ್ನು ಪ್ರೋತ್ಸಾಹಿಸುವ ಮೂಲಕ ಕಾವ್ಯವು ಹುಲುಸಾಗಿ ಹಾಗೂ ಸತ್ವಯುತವಾಗಿ ಬೆಳೆಯಲು ಸಹಕರಿಸಬೇಕು ಎಂದರು.

ಈ ಹಿನ್ನೆಲೆಯಲ್ಲಿ ಕವಿಗಳ ಸಮಾಗಮದ ಉದ್ದೇಶವನ್ನು ಈ ಸಮ್ಮೇಳನ ಹೊಂದಿದೆ. ಯುವ ಕವಿಗಳು ಹೆಚ್ಚು ಓದು ಹಾಗೂ ಚರ್ಚೆಗಳ ಮೂಲಕ ಕಾವ್ಯ ಪರಂಪರೆಯನ್ನು ಮುಂದುವರಿಸಬೇಕು ಎಂದು ಹೇಳಿದರು.

ವಲಯ ಅರಣ್ಯಾಧಿಕಾರಿ ಮಂಜುನಾಥ ಮೇಗಲಮನಿ ಕಪ್ಪತಗುಡ್ಡದ ಜೀವವೈವಿಧ್ಯತೆ ಕುರಿತು ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ, ಚಂದ್ರಶೇಖರ ವಸ್ತ್ರದ, ಡಾ. ಬಿ.ಜಿ. ಪಾಟೀಲ, ದೇವರೆಡ್ಡಿ ಅಗಸನಕೊಪ್ಪ, ಸುಶೀಲಮ್ಮ ಅಗಸನಕೊಪ್ಪ, ರಮಾಕಾಂತ ಕಮತಗಿ, ಎಂ.ಜಿ. ಗಚ್ಚಣ್ಣವರ, ಸುರೇಶ ಕುಂಬಾರ, ಡಿ.ಎಲ್. ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಿಶೋರಬಾಬು ಸ್ವಾಗತಿಸಿದರು. ಈಶ್ವರ ಮೆಡ್ಲೇರಿ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ಕವಿಗಳು ಕವಿ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ಧ್ವಜಾರೋಹಣ ಹಾಗೂ ಭುವನೇಶ್ವರಿ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

## ನಾಟಕ ಅಕಾಡೆಮಿ ಪ್ರಶಸ್ತಿ ವಿಜೇತೆ ಅನಸೂಯಾಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪಡೆದಿರುವ ರಂಗಭೂಮಿ ಕಲಾವಿದೆ ಅನಸೂಯಾ ಹೊಸೂರಮಠ ಅವರನ್ನು ಲಕ್ಕುಂಡಿ ಗ್ರಾಮ ಪಂಚಾಯಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ ಹಾಗೂ ಯುವ ಧುರೀಣ ಬಸನಗೌಡ ಬಿರಾದಾರ, ರಂಗಭೂಮಿಯಲ್ಲಿ ತಮ್ಮದೇ ಆದ ಅಭಿನಯದ ಮೂಲಕ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿರುವ ಅನಸೂಯಾ ಅವರ ಕಲಾ ಸೇವೆ ಅಮೋಘವಾಗಿದೆ. ಅವರ ಅಭಿನಯವನ್ನು ಗುರುತಿಸಿ ಸರ್ಕಾರ ಜೀವಮಾನ ಸಾಧನೆಗಾಗಿ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ನೀಡಿರುವುದು ಲಕ್ಕುಂಡಿ ಗ್ರಾಮಕ್ಕೆ ಹೆಮ್ಮೆಯ ಸಂಗತಿ ಎಂದರು.

ಪಿಡಿಒ ಅಮೀರನಾಯಕ ಮಾತನಾಡಿ, ಹತ್ತಾರು ನಾಟಕಗಳಲ್ಲಿ ನಾಯಕಿ ಪಾತ್ರದಲ್ಲಿ ಅಭಿನಯಿಸಿರುವ ಅನಸೂಯಾ ಅವರು ಪ್ರಮುಖ ನಾಟಕ ಕಂಪನಿಗಳಲ್ಲಿ ಕಲಾವಿದೆಯಾಗಿ ಸೇವೆ ಸಲ್ಲಿಸಿರುವುದು ಹೆಮ್ಮೆಯ ಸಂಗತಿ. ಅವರ ಕಲಾ ಪ್ರತಿಭೆಯನ್ನು ಗುರುತಿಸಿ ಸರ್ಕಾರ ನಾಟಕ ಅಕಾಡೆಮಿ ಪ್ರಶಸ್ತಿ ನೀಡಿರುವುದು ಸ್ಮರಣೀಯವಾಗಿದೆ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ₹5 ಸಾವಿರ ಕಾಣಿಕೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಲಕ್ಷ್ಮಣ ಪೂಜಾರ, ಕಲ್ಲಪ್ಪ ಅಂಬಕ್ಕಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೂಲಿಕಾರ್ಮಿಕರಿಗೆ ಆರೋಗ್ಯ ತಪಾಸಣೆ; ಕೆಮ್ಮಣ್ಣುಗುಂಡಿ ಕೆರೆ ಕಾಮಗಾರಿಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ತಾಲ್ಲೂಕಿನ ವಡವಿ ಗ್ರಾಮ ಪಂಚಾಯಿತಿ ವತಿಯಿಂದ ಗ್ರಾಮದ ಕೂಲಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸಿ, ಕೆಮ್ಮಣ್ಣುಗುಂಡಿ ಕೆರೆಯಲ್ಲಿ ವಿ.ಬಿ.ಜಿ.-ಆರ್ ಎಎಂಜಿ (VBGRAMG) ಯೋಜನೆಯಡಿ ಕಾಮಗಾರಿಗೆ ಚಾಲನೆ ನೀಡಲಾಯಿತು.

ಸರ್ಕಾರದ ಆದೇಶದಂತೆ ಯೋಜನೆಯಡಿ ಪುರುಷರು ಹಾಗೂ ಮಹಿಳೆಯರಿಗೆ ಸಮಾನವಾಗಿ ದಿನಕ್ಕೆ ₹382 ಕೂಲಿ ನೀಡಲಾಗುತ್ತಿದ್ದು, ಪ್ರತಿ ಕುಟುಂಬಕ್ಕೆ 125 ದಿನಗಳ ಕೆಲಸ ಒದಗಿಸಲಾಗುತ್ತಿದೆ. ಶಿರಹಟ್ಟಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ಅವರ ನಿರ್ದೇಶನದಂತೆ ಕಾಮಗಾರಿ ಆರಂಭಿಸಲಾಯಿತು.

ಯೋಜನೆಯಡಿ ಕೆಲಸ ಪಡೆಯಲು ಕೂಲಿ ಕಾರ್ಮಿಕರಿಂದ ನಮೂನೆ-6ರಲ್ಲಿ ಅರ್ಜಿ ಸ್ವೀಕರಿಸುವ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಜಿ ಸಲ್ಲಿಸಿದವರಿಗೆ ಉದ್ಯೋಗ ಕಲ್ಪಿಸಲಾಗುತ್ತಿದೆ.

ಕಾಮಗಾರಿ ಆರಂಭಕ್ಕೂ ಮುನ್ನ ಕೂಲಿ ಕಾರ್ಮಿಕರಿಗೆ ವೈದ್ಯಕೀಯ ತಪಾಸಣೆ ನಡೆಸಲಾಯಿತು. ಆರೋಗ್ಯ ಸಿಬ್ಬಂದಿಗಳಾದ ಪ್ರತಿಭಾ ಸಿದ್ದರಡ್ಡಿ, ಮಾಂತೇಶ ತಿಮ್ಮಾಪೂರ ಹಾಗೂ ಆಶಾ ಕಾರ್ಯಕರ್ತೆ ನಾಗರತ್ನಾ ತಿಕ್ಕುಂಡಿ ಅವರ ನೇತೃತ್ವದಲ್ಲಿ ಆರೋಗ್ಯ ತಪಾಸಣೆ ನಡೆಸಲಾಯಿತು.

ವಡವಿ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಹಾಗೂ ಶಿರಹಟ್ಟಿ ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಪ್ರಶಾಂತ ಆರ್. ಕುಲಕರ್ಣಿ ಅವರ ಮಾರ್ಗದರ್ಶನದಲ್ಲಿ ಆರೋಗ್ಯ ತಪಾಸಣೆ ಮತ್ತು ಕಾಮಗಾರಿ ಆರಂಭದ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಅಭಿವೃದ್ಧಿ ಅಧಿಕಾರಿ ಎಚ್.ಟಿ. ತಳವಾರ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಎ.ಎಂ. ಹಿರೇಮಠ, ಇಂಜಿನಿಯರ್ ಲಿಂಗರಾಜು ಅರಸಿಣದ, ಸಿಬ್ಬಂದಿ ಮಂಜುನಾಥ ರಾಜೂರ, ಮೇಟಗಳಾದ ನಾಗರಾಜ ತಂಗೋಡ, ಅಶೋಕ ದಾಸರ, ನಾಗರಾಜ ಇಟಗಿ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

### ಕುಡುವಕ್ಕಲಿಗರ ಸಂಘದ ವಾರ್ಷಿಕ ಮಹಾಸಭೆಯಲ್ಲಿ ಹೊಸಳ್ಳಿ ಶ್ರೀಗಳ ನುಡಿ

# ಶೈಕ್ಷಣಿಕ ಪ್ರಗತಿಗೆ ಲಿಂಗರಾಜ ದೇಸಾಯಿ ಅವರ ದೂರದೃಷ್ಟಿಯೇ ಪ್ರೇರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಲಿಂಗಾಯತ ಸಮಾಜದ ಶೈಕ್ಷಣಿಕ ಪ್ರಗತಿಗೆ ತ್ಯಾಗವೀರ ಶ್ರೀ ಶಿರಸಂಗಿ ಲಿಂಗರಾಜ ದೇಸಾಯಿ ಅವರ ದೂರದೃಷ್ಟಿ, ತ್ಯಾಗ ಹಾಗೂ ಸೇವಾ ಮನೋಭಾವವೇ ಪ್ರಮುಖ ಪ್ರೇರಣೆಯಾಗಿದೆ. ಸಮಾಜದ ಭವಿಷ್ಯವನ್ನು ದೂರದೃಷ್ಟಿಯಿಂದ ಕಂಡು ಶಿಕ್ಷಣಕ್ಕೆ ಅವರು ನೀಡಿದ ಮಹತ್ವದಿಂದಾಗಿ ಇಂದು ಲಿಂಗಾಯತ ಸಮಾಜದವರು ಶಿಕ್ಷಣ ಕ್ಷೇತ್ರದಲ್ಲಿ ಉನ್ನತ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ಹೊಸಳ್ಳಿಯ ಪೂಜ್ಯ ಜ. ಅಭಿನವ ಬೂದಿಶ್ವರ ಮಹಾಸ್ವಾಮಿಗಳು ಹೇಳಿದರು. ನಗರದ ಕುಡುವಕ್ಕಲಿಗರ ಭವನದಲ್ಲಿ ಭಾನುವಾರ ನಡೆದ ಅಖಿಲ ಕರ್ನಾಟಕ ಲಿಂಗಾಯತ ಕುಡುವಕ್ಕಲಿಗರ ಸಂಘದ 14ನೇ ವಾರ್ಷಿಕ ಮಹಾಸಭೆಯಲ್ಲಿ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ತ್ಯಾಗವೀರ ಲಿಂಗರಾಜ ದೇಸಾಯಿ ಅವರ 120ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಸ್ವಾಮೀಜಿ, ಸಮಸ್ತ ಲಿಂಗಾಯತ ಸಮಾಜದ ಅಭಿವೃದ್ಧಿಗೆ ಲಿಂಗರಾಜ ದೇಸಾಯಿ ನೀಡಿದ ಕೊಡುಗೆ ಅಪಾರ. ಶಿಕ್ಷಣ, ಸಮಾಜಸೇವೆ ಹಾಗೂ ರೈತರ ಹಿತಕ್ಕಾಗಿ ಅವರು ಕೈಗೊಂಡ ಕಾರ್ಯಗಳು ಅವರ ಮಹಾನ್ ತ್ಯಾಗ ಮತ್ತು ಸಮಾಜಮುಖಿ ಚಿಂತನೆಗೆ ಸಾಕ್ಷಿಯಾಗಿವೆ ಎಂದರು.

ಲಿಂಗರಾಜ ದೇಸಾಯಿ ಅವರ ದೂರದೃಷ್ಟಿ ಹಾಗೂ ಸೇವಾ ಮನೋಭಾವವನ್ನು ಇಂದಿನ ಪೀಳಿಗೆ ಆದರ್ಶವಾಗಿಸಿಕೊಂಡು ಸಮಾಜದ ಶೈಕ್ಷಣಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಕರೆ ನೀಡಿದರು.

ಸಂಘದ ಕೋಶಾಧ್ಯಕ್ಷ ಎ.ಎಸ್. ಪಾಟೀಲ ಮಾತನಾಡಿ, ಲಿಂಗರಾಜ ದೇಸಾಯಿ ಅವರು ಕಾಶಿಯಲ್ಲಿ ಅಧ್ಯಯನ ಪೀಠ ಸ್ಥಾಪಿಸುವಲ್ಲಿ ವಹಿಸಿದ ಪಾತ್ರ, ಹಾಗೂ ಬರಗಾಲದ ಸಂದರ್ಭದಲ್ಲಿ ಕೆರೆ-ಕಟ್ಟೆಗಳನ್ನು ನಿರ್ಮಿಸಿ ರೈತರಿಗೆ ನೆರವಾದ ಸೇವೆಯನ್ನು ಸ್ಮರಿಸಿದರು.

ಸಂಘದ ರಾಜ್ಯಾಧ್ಯಕ್ಷ ಶಿವಕುಮಾರ್ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರು, ಇಬ್ಬರು ಮಾಜಿ ಸೈನಿಕರು, ಶ್ರೇಷ್ಠ ರೈತರು, ಗೌರವ ಡಾಕ್ಟರೇಟ್ ಪದವಿ ಪಡೆದವರು ಹಾಗೂ ಪರ್ವತಾರೋಹಿಯನ್ನು ಸನ್ಮಾನಿಸಲಾಯಿತು. ಕುಡುವಕ್ಕಲಿಗರ ಭವನದ ನಿರ್ಮಾಣಕ್ಕೆ ನೆರವಾಗುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಬಂಪರ್ ಲಾಟರಿ ಯೋಜ ನೆಯ ಡ್ರಾ ನೆರವೇರಿಸಲಾಯಿತು. ಸಂಘದ ಕಾರ್ಯದರ್ಶಿ ಶರಣಪ್ಪ ದಿಡ್ಡಿಮನಿ ವಾರ್ಷಿಕ ವರದಿ ಹಾಗೂ ಆಯವ್ಯಯ ಪತ್ರಿಕೆ ಮಂಡಿಸಿದರು. ಸಭೆಯಲ್ಲಿ ಚಆರ್‌ಸಿ ಅದನ್ನು ಅನುಮೋದಿಸಲಾಯಿತು. ಸಮಾಜದ ಹಿರಿಯರಾದ ಕಲ್ಲನಗೌಡ್ರ, ಈರಪ್ಪಣ್ಣ ಬಿಸನಹಳ್ಳಿ, ವಿ.ಜಿ. ಕನಾಜ, ಸಿ.ಎನ್. ಜನಯಿ ಹಾಗೂ ವಿ.ಕೆ. ಬಳಗೇರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಯಲ್ಲಪ್ಪಗೌಡ ಸಂಕನಗೌಡ ಪ್ರಾರ್ಥಿ ಸಿದರು. ಪ್ರಶಾಂತ ಕನಾಜ ನಿರೂಪಿಸಿದರು.

## ಸ್ವಯಂ ಉದ್ಯೋಗಕ್ಕೆ 10 ದಿನಗಳ ಉದ್ಯಮಶೀಲತಾ ತರಬೇತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ವತಿಯಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಆಸಕ್ತ ಎಲ್ಲ ವರ್ಗದ ಪುರುಷರು ಹಾಗೂ ಮಹಿಳೆಯರಿಗಾಗಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ನಗರದ ಮಹೇಶ್ವರಿ ವಿವಿಧೋದ್ದೇಶಗಳ ಮಹಿಳಾ ಮಂಡಳಿಯಲ್ಲಿ ಇದೇ ತಿಂಗಳ ಕೊನೆಯ ವಾರದಿಂದ ತರಬೇತಿ ಕಾರ್ಯಕ್ರಮ ನಡೆಯಲಿದೆ. ಸ್ವಂತ ಉದ್ಯಮ ಆರಂಭಿಸಲು ಆಸಕ್ತಿ ಹೊಂದಿರುವವರು ತರಬೇತಿಯ ಸದುಪಯೋಗ ಪಡೆದುಕೊಳ್ಳಬಹುದು. ತರಬೇತಿ ಕಾರ್ಯಕ್ರಮದ ಕುರಿತು ಹೆಚ್ಚಿನ ಮಾಹಿತಿಗಾಗಿ 77958 55847 ಹಾಗೂ 87227 59959 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಗದಗ**

ಸಂಖ್ಯೆ:ಡಿ2/ಜಿಶಿತ/ಗದಗ/ಫುಡ್ ಟೆಂಡರ್/12/2026-27 ದಿನಾಂಕ:25/08/2026

**ಇ-ಟೆಂಡರ್ ಪ್ರಕಟಣೆ**

ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ರವರ ಸುತ್ತೋಲೆಯಂತೆ 2026-27 ನೇ ಸಾಲಿನ ಪಿ.ಎ.ಬಿ ಅನುಮೋದಿತ ವಿವಿಧ ತರಬೇತಿಗಳು ಹಾಗೂ ಇತರೆ ಚಟುವಟಿಕೆಗಳಿಗೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಜಿಲ್ಲಾ ಹಾಗೂ ತಾಲ್ಲೂಕಾ ಹಂತದಲ್ಲಿ ನಡೆಯುವ ತರಬೇತಿಗಳಿಗೆ ಸಿದ್ಧಪಡಿಸಿದ ಆಹಾರ ಪದಾರ್ಥಗಳ ಸರಬರಾಜು ಮಾಡಲು ಇ-ಟೆಂಡರ್‌ನ್ನು **ದಿನಾಂಕ : 25/08/2026** ರಿಂದ ಕರೆಯಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ : 15/09/2026** ಟೆಂಡರ್ ಸಂಖ್ಯೆ:**DPI/2026-27/SE0499**

ಮಾಹಿತಿಗಾಗಿ https://kppp.karnataka.gov.in ಜಾಲತಾಣ ಸಂಪರ್ಕಿಸುವುದು.

ಸಹಿ/- ಉಪನಿರ್ದೇಶಕರು(ಅಭಿವೃದ್ಧಿ)
ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ
ಗದಗ

ವಾ.ಸಾ.ಸಂ.ಇ/ಗದಗ/216/ದೇಶಪಾಂಡೆಪಬ್ಲಿಸಿಟಿ/2026-27


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka